# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 145 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 26–12–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 145 | RNI No: KARKAN/2023/88462 | KA/SK/CTA-874/2024-2026 | Chitradurga | Date: 26-12-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದೇಶದಲ್ಲಿಯೇ ಮಾದರಿ ಗ್ರಾಪಂ ಕಟ್ಟಡ ನಿರ್ಮಿಸಿ: ಸಂಸದ ಕಾರಜೋಳ ಸಲಹೆ 2

ಮಹಿಳೆಯರು ಆರ್ಥಿಕವಾಗಿ ಸಬಲರನ್ನಾಗಿ ಮಾಡುವುದು ನಮ್ಮ ಗುರಿ: ವಿರೇಂದ್ರ ಹೆಗ್ಗಡೆ 3

ಬಗರ್ ಹುಕುಂ ಸಮಿತಿಯಲ್ಲಿ 44 ಅರ್ಜಿ ವಿಲೇವಾರಿ ಮಾಡಿದ ಶಾಸಕರು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 20 ಲೀಟರ್ ಸೆಂದಿ ಸಂಗ್ರಹಿಸಿ ಮಾರಾಟ, ಅಬಕಾರಿ ದಾಳಿ



» ಹಿರಿಯೂರು

ತಾಲೂಕಿನ ಆರನಕಟ್ಟೆ ಗ್ರಾಮದ ಮನೆಯೊಂದರಲ್ಲಿ ಅಕ್ರಮವಾಗಿ 20 ಲೀಟರ್ ಸೆಂದಿ ಸಂಗ್ರಹಿಸಿ ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ಅಬಕಾರಿ ಇಲಾಖೆ ಪೋಲಿಸರು ಭಾನುವಾರ ಬಂಧಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.ಬಂಧಿತ ಆರೋಪಿಯನ್ನು ನಾಗರಾಜ (55) ಎಂದು ಗುರುತಿಸಲಾಗಿದೆ. ಆರೋಪಿಯು ಅಕ್ರಮವಾಗಿ ತೆಂಗಿನ ಮರದ ಸೆಂದಿಯನ್ನು ಸಂಗ್ರಹಿಸಿ ಮಾರಾಟ ಮಾಡುತ್ತಿದ್ದ ಎನ್ನಲಾಗಿದೆ. ಖಚಿತ ಮಾಹಿತಿ ಮೇರೆಗೆ ಅಬಕಾರಿ ಪೊಲೀಸರು ದಾಳಿ ನಡೆಸಿದ್ದಾರೆ.ಈ ಸಂದರ್ಭದಲ್ಲಿ ಅಬಕಾರಿ ನಿರೀಕ್ಷಕಿ ಭಾರತಮ್ಮ, ಅಬಕಾರಿ ಮುಖ್ಯ ಪೇದೆಗಳಾದ ವೈ.ಆರ್. ಲೋಹಿತ್, ಎಸ್.ಸತೀಶ್, ಶ್ರೀನಿವಾಸ್, ಅಬಕಾರಿ ಪೇದೆ ಶ್ರೀಶೈಲ ಪಾಟೀಲ್, ಡ್ರೈವರ್ ರಮೇಶ್ ಹಾಜರಿದ್ದರು.

### ಅಕ್ರಮವಾಗಿ ಜಮೀನು ಮಂಜೂರು, ತನಿಖೆಗೆ ಆಗ್ರಹ



» ಹಿರಿಯೂರು

ತಾಲೂಕಿನ ಕಸಬಾ ಹೋಬಳಿ ಹಿರಿಯೂರು ಗ್ರಾಮದ ರಿಸನಂ 49, 68, 70 ಮತ್ತು 315 ರ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಜಮೀನು ಮಂಜೂರು ಮಾಡಿರುವ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಿ ನಿಯಾಮಾನುಸಾರ ಕ್ರಮ ಕೈಗೊಳ್ಳುವಂತೆ ರೈತ ಸಂಘದ ತಾಲೂಕು ಅಧ್ಯಕ್ಷ ಕೆಟಿ ತಿಪ್ಪೇಸ್ವಾಮಿ ನಗರಸಭೆಗೆ ಮನವಿ ಸಲ್ಲಿಸಿದರು.

**ತಾಲೂಕಿನ ಕಸಬಾ ಹೋಬಳಿ:** ಹಿರಿಯೂರು ಗ್ರಾಮದ ರಿಸನಂ 49, 68, 70 ಮತ್ತು 315 ರ ಮೂಲ ಜಮೀನು ಸರ್ಕಾರಿ ಎಂದು ಇಲಾಖೆಯ ದಾಖಲೆಯಲ್ಲಿ ಧೃಡಪಟ್ಟಿರುತ್ತದೆ. ಆದರೆ ಅಧಿಕಾರಿಗಳು, ಭೂಗಳ್ಳರು ಹಾಗೂ ರಾಜಕಾರಣಿಗಳು ಅಕ್ರಮವಾಗಿ ದಾಖಲೆ ಸೃಷ್ಟಿಸಿ ಖಾತೆ ಮಾಡಿಕೊಂಡು ಭೂ ಪರಿವರ್ತನೆ ಮಾಡಿಕೊಂಡು ನಿಯಮಗಳನ್ನು ಉಲ್ಲಂಘನೆ ಮಾಡಿ ಖಾತೆ ಮಾಡಿ ಹಂಚಿಕೊಂಡಿರುತ್ತಾರೆ. ಕಂದಾಯ ಇಲಾಖೆಯ ನಿಯಮಗಳನ್ನು ಉಲ್ಲಂಘನೆ ಮಾಡಿ ಸರ್ಕಾರಕ್ಕೆ ವಂಚನೆ ಮಾಡಿದ್ದು ನೂರಾರು ಕೋಟಿಯಷ್ಟು ಸರ್ಕಾರಕ್ಕೆ ನಷ್ಟ ಉಂಟು ಮಾಡಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಗೆ ಅನೇಕ ಬಾರಿ ಸಂಘ ಸಂಸ್ಥೆಗಳು,ಸಾರ್ವಜನಿಕರು, ಸಾಮಾಜಿಕ ಕಾರ್ಯಕರ್ತರು ದೂರು ಸಲ್ಲಿಸಿದ್ದು ಸಮಗ್ರ ತನಿಖೆ ನಡೆಸಿ ಅಕ್ರಮ ಖಾತೆ ರದ್ದುಗೊಳಿಸಿ ಭೂಮಿಯನ್ನು ಸರ್ಕಾರದ ವಶಕ್ಕೆ ನೀಡಬೇಕು. ಈಗಾಗಲೇ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಅನೇಕ ಬಾರಿ ಇಲಾಖೆಯವರು ತನಿಖೆ ನಡೆಸಿದ್ದು ಅಧಿಕಾರಿಗಳು ಭೂ ಗಳ್ಳರು ಹಾಗೂ ರಾಜಕಾರಣಿಗಳ ಜೊತೆ ಸೇರಿ ತನಿಖೆ ಹಂತದಲ್ಲೇ ತನಿಖೆಯನ್ನು ದಾರಿ ತಪ್ಪಿಸುತ್ತಾ ಕಾಲಹರಣ ಮಾಡುತ್ತಿದ್ದಾರೆ. ಈ ಪ್ರಕರಣ ಮೇಲಾಧಿಕಾರಿಗಳ ಹಂತದಲ್ಲೇ ತನಿಖೆ ಆಗಬೇಕಾಗಿದ್ದು ನಮ್ಮ ಮನವಿ ತಲುಪಿದ 7 ದಿನದೊಳಗಾಗಿ ಗಮನಹರಿಸಿ ಅಗತ್ಯ ಕ್ರಮ ಕೈಗೊಳ್ಳಲು ಆಗದಿದ್ದಲ್ಲಿ ಯಾವುದೋ ಆಮಿಷಕ್ಕೆ ಒಳಗಾಗಿ ಆರೋಪಿತರೊಂದಿಗೆ ಶಾಮೀಲಾಗಿ ಅಕ್ರಮದಲ್ಲಿ ಭಾಗೀದಾರರು ಮತ್ತು ನಮ್ಮ ಆರೋಪವನ್ನು ಒಪ್ಪಿಕೊಳ್ಳಲಾಗಿದೆ, ದಾವೆ ದಾಖಲಿಸಲು ಅನುಮತಿ ನೀಡಲಾಗಿದೆ ಎಂದು ಬಾವಿಸಿತಮ್ಮನ್ನೂಒಳಗೊಂಡಂತೆತಪ್ಪಿತಸ್ತರವಿರುದ್ಧ ಸಕ್ಷಮ ಪ್ರಾಧಿಕಾರ ಮತ್ತು ಘನ ನ್ಯಾಯಾಲಯದಲ್ಲಿ ದೂರು ದಾಖಲಿಸಲಾಗುವುದು

# 1924ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ ಪೂರ್ವಸಿದ್ಧತೆ ವೀಕ್ಷಿಸಿದ ಸಿದ್ದರಾಮಯ್ಯ

## ವರ್ಷಪೂರ್ತಿ ರಾಜ್ಯದೆಲ್ಲೆಡೆ ಮಹಾತ್ಮಾ ಗಾಂಧಿ ವಿಚಾರಧಾರೆ ಪ್ರಚಾರ ಕಾರ್ಯಕ್ಕೆ ಏರ್ಪಾಡು– ಮುಖ್ಯಮಂತ್ರಿ ಸಿದ್ದರಾಮಯ್ಯ

» ಬೆಳಗಾವಿ

1924 ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ ಪೂರ್ವಸಿದ್ಧತೆ ವೀಕ್ಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಗಾಂಧೀಜಿಯವರ ವಿಚಾರಧಾರೆ ಯನ್ನು ಪ್ರಚುರಪಡಿಸಲು ವರ್ಷಪೂರ್ತಿ ರಾಜ್ಯದೆಲ್ಲೆಡೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅವರು ಇಂದು ಬೆಳಗಾವಿಯ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

1924 ರಲ್ಲಿ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷ ಪೂರೈಸಿದ್ದು, ಆ ಪ್ರಯುಕ್ತ ಶತಮಾನೋತ್ಸವದ ಆಚರಣೆಗೆ ಸಕಲ ಸಿದ್ಧತೆಗಳನ್ನುಮಾಡಿಕೊಂಡಿದೆ. ಡಿಸೆಂಬರ್ 26 ರಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ, ಸುವರ್ಣ ಸೌಧದ ಪಕ್ಕದಲ್ಲಿ ಗಾಂಧೀಜಿಯವರ ಪ್ರತಿಮೆ ಅನಾವರಣದ ಕಾರ್ಯಕ್ರಮವಿದ್ದು, 27ರಂದು ಸಾರ್ವಜನಿಕ ಸಭೆ ಏರ್ಪಡಿಸಲಾಗಿದೆ ಎಂದರು.

**ಬದಲಾವಣೆ ನಿರಂತರವಾದ ಪ್ರಕ್ರಿಯೆ:** ಕಾಂಗ್ರೆಸ್ ಅಧಿವೇಶನದಿಂದ ಪಕ್ಷದಲ್ಲಿ ಬದಲಾವಣೆ ಪರ್ವ ಆರಂಭವಾಗುವುದೇ ಎಂಬ ಪರ್ತಕರ್ತರ ಪ್ರಶ್ನೆಗೆ ಪ್ರತಿಕ್ರಿಯೆ ಇಡಿ, ಬದಲಾವಣೆ ನಿರಂತರವಾದ ಪ್ರಕ್ರಿಯೆ. ನೂರು ವರ್ಷಗಳ ಹಿಂದಿದ್ದ ಪರಿಸ್ಥಿತಿ ಈಗಿಲ್ಲ. ರಾಜಕೀಯ ಬದಲಾವಣೆ ಹಾಗೂ ಬೆಳವಣಿಗೆಗಳು ಆಗುತ್ತಿರುತ್ತವೆ ಎಂದರು.

**ತನ್ನ ತಪ್ಪು ಮರೆಮಾಚಲು ರಾಜ್ಯಪಾಲರಿಗೆ ದೂರು:** ಸರ್ಕಾರದ ವಿರುದ್ಧ ರಾಜ್ಯಪಾಲರಿಗೆ ಶಾಸಕಸಿ.ಟಿ.ರವಿಯವರುದೂರುನೀಡಿರುವ ಬಗ್ಗೆ ಪ್ರತಿಕ್ರಿಯೆ ನಿಡಿ, ಸಿ.ಟಿ.ರವಿಯವರು ತಮ್ಮ ತಪ್ಪನ್ನು ಮರೆಮಾಚಲು ಈ ರೀತಿ ಮಾಡುತ್ತಿದ್ದು, ಅವರ ಪ್ರಕರಣವನ್ನು ಸಿಐಡಿ ತನಿಖೆ ಮಾಡುತ್ತಿದೆ. ತನಿಖಾ ವರದಿ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

**ಠಾಣೆಯೊಳಗೆ ಬಿಜೆಪಿ ಸಭೆಗೆ ಅವಕಾಶ ನೀಡಿದ್ದು ತಪ್ಪು:** ಸಿ.ಟಿ.ರವಿ ಪ್ರಕರಣ ಸಂಬಂಧ ಒಬ್ಬ ಪೊಲೀಸ್ ಅಧಿಕಾರಿಯನ್ನು ಅಮಾನತ್ತು ಮಾಡಿರುವ ಬಗ್ಗೆ ಪ್ರತಿಕ್ರಯಿಸಿ, ಪೊಲೀಸ್ ಠಾಣೆಯಲ್ಲಿ ಬಿಜೆಪಿ ಪಕ್ಷದ ಸಭೆ ನಡೆಸಲು ಅವಕಾಶ ಕೊಟ್ಟ ಕಾರಣಕ್ಕಾಗಿ ಅಧಿಕಾರಿಯನ್ನು ಅಮಾನತ್ತುಗೊಳಿಸಲಾಗಿದೆ. ಪೊಲೀಸ್ ಠಾಣೆಯೊಂದರಲ್ಲಿ ರಾಜಕೀಯ ಪಕ್ಷದ ಸಭೆ ನಡೆಸಲು ಅವಕಾಶ ನೀಡಿದ್ದು ತಪ್ಪು. ಸಿ.ಟಿ.ರವಿಯವರಿಗೆ ರಕ್ಷಣೆ ನೀಡುವ ಉದ್ದೇಶದಿಂದ ಅವರನ್ನು ಬೇರೆಡೆಗಳಿಗೆ ಕರೊದೊಯ್ಯಲಾಗಿತ್ತು ಎಂದು ಬೆಳಗಾವಿಯ ಪೊಲೀಸ್ ಕಮೀಷನರ್ ರವರು ಸಹ ಸ್ಪಷ್ಟಪಡಿಸಿರುವುದಾಗಿ ತಿಳಿಸಿದರು. ಶಾಸಕ ಮುನಿರತ್ನ ರವರಿಗೆ ಮೊಟ್ಟೆ ಎಸೆದ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ನೀಡಿ, ಶಾಸಕರಿಗೆ ಮೊಟ್ಟೆ ಎಸದವರು ಯಾವ ಪಕ್ಷಕ್ಕೆ ಸೇರಿದವರು ಎಂಬ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ.

# ಬೆಳಗಾವಿಯಲ್ಲಿ 'ಅಸ್ಮಿತೆ' ವ್ಯಾಪಾರಮೇಳ–2024

## ದುಡಿಯುವ ವರ್ಗಗಳ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಸಿದ್ದರಾಮಯ್ಯ ಅವರ ಮತ್ತೊಂದು ಕನಸಿಗೆ ಚಾಲನೆ

» ಬೆಳಗಾವಿ

ದುಡಿಯುವ ವರ್ಗಗಳ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾಳಜಿಯ ಮತ್ತೊಂದು ಕುರುಹಾಗಿ ಸ್ವ–ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳು ಹಾಗೂ ಖಾದಿ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟವನ್ನು ನಾಳೆ (ಡಿ 26) ಮುಖ್ಯಮಂತ್ರಿಗಳೇ ಉದ್ಘಾಟಿಸಲಿದ್ದಾರೆ.

"ಅಸ್ಮಿತೆ ವ್ಯಾಪಾರಮೇಳ–2024" ಹೆಸರಿನಲ್ಲಿ ಮುಖ್ಯಮಂತ್ರಿಗಳ ಕನಸು ಮತ್ತು ಕಾಳಜಿಯನ್ನು ಸಚಿವ ಶರಣ ಪ್ರಕಾಶ್ ಪಾಟೀಲ್ ಅವರು ಸಾಕಾರಗೊಳಿಸಿದ್ದಾರೆ.

ಶ್ರಮಿಕ ವರ್ಗದ ಮಹಿಳಾ ಶಕ್ತಿಯನ್ನು ಆರ್ಥಿಕವಾಗಿ ಮೇಲೆತ್ತಬೇಕು ಎನ್ನುವ ಮುಖ್ಯ ಉದ್ದೇಶದೊಂದಿಗೆ ಹಲವಾರು ಯೋಜನೆಗಳನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದೆ. ಈ ನಿಟ್ಟಿನಲ್ಲಿ ಸ್ವ ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳು ಹಾಗೂ ಖಾದಿ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಬೆಳಗಾವಿಯಲ್ಲಿ ಆಯೋಜಿಸಲಾಗಿದೆ.

*ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ* ಮತ್ತು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮತ್ತು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಹಾಗೂ ಬೆಳಗಾವಿ ಮಹಾನಗರ ಪಾಲಿಕೆ ಸಹಭಾಗಿತ್ವದಲ್ಲಿ ಬೆಳಗಾವಿಯ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಈ ಮೇಳವನ್ನು ಡಿಸೆಂಬರ್ 26 ರಿಂದ ಜನವರಿ 4 ರವರೆಗೆ ಆಯೋಜಿಸಲಾಗಿದೆ.

ನಗರ ಹಾಗೂ ಗ್ರಾಮೀಣ ಸ್ವ–ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳು ಮಾರಾಟ ಮಾಡುತ್ತಿರುವುದರಿಂದ ಹೆಚ್ಚು ಹೆಚ್ಚು ಸಾರ್ವಜನಿಕರು ಈ ಮೇಳದ ಸದುಪಯೋಗವನ್ನು ಪಡೆದುಕೊಂಡು ಸ್ವ–ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳನ್ನು ಖರೀದಿಸಿ, ಹೆಚ್ಚಿನ ವಹಿವಾಟಿನೊಂದಿಗೆ ಅವರ ಆರ್ಥಿಕ ಸಬಲತೆಗೆ ಕೈ ಜೋಡಿಸಲಿದ್ದಾರೆ ಎಂಬ ನಿರೀಕ್ಷೆ ಹೊಂದಲಾಗಿದೆ.




ಮಹಿಳೆಯರ ಉತ್ಪನ್ನಗಳ ಮಾರಾಟಕ್ಕೆ ಹಳ್ಳಿ ಸಂತೆ, ತಾಲ್ಲೂಕು ಮಟ್ಟದಲ್ಲಿ ಮಾಸಿಕ ಸಂತೆ, ಜಿಲ್ಲಾ ವಸ್ತು ಪ್ರದರ್ಶನ ಮಾರಾಟ ಮೇಳ ಹಾಗೂ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ನಡೆಯುವ ಮೇಳಗಳನ್ನು ಆಯೋಜಿಸುವ ಮೂಲಕ ಮಾರುಕಟ್ಟೆ ಒದಗಿಸಲಾಗುತ್ತಿದೆ.

ಬೆಳಗಾವಿಯಲ್ಲಿ ಕಳೆದ 3 ವರ್ಷದಿಂದ ಬೃಹತ್ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲಾಗಿದೆ. ಪ್ರತಿ ದಿನ ಸಂಜೆ 6.30 ರಿಂದ 9.00 ಗಂಟೆಯವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ.

ರಾಜ್ಯದ ಎಲ್ಲಾ ಜಿಲ್ಲೆಗಳ ಸ್ವ–ಸಹಾಯ ಗುಂಪಿನ ಮಹಿಳೆಯರು ತಮ್ಮ ಜಿಲ್ಲೆಯ ಪ್ರಮುಖ ಉತ್ಪನ್ನಗಳನ್ನು ಇಲ್ಲಿ ಪ್ರದರ್ಶಿಸುತ್ತಿದ್ದಾರೆ. ಒಟ್ಟು 150 ಮಳಿಗೆಗಳನ್ನು ಸ್ಥಾಪಿಸಲಾಗಿದ್ದು, ಅದರಲ್ಲಿ 10 ಆಹಾರ ಮೇಳದ ಮಳಿಗೆಗಳು ಮತ್ತು 50 ಖಾದಿ ಉತ್ಪನ್ನಗಳ ಮಳಿಗೆಗಳನ್ನು ಒಳಗೊಂಡಿದೆ.

ಈ ಮೇಳಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಡಿಸೆಂಬರ್ 26ರ ಬೆಳಗ್ಗೆ 10.30 ಯಿಂದ ರಾತ್ರಿ 9.30 ರವರೆಗೆ ಪ್ರದರ್ಶನವಿರಲಿದೆ.

**ಪ್ರದರ್ಶನಗೊಳ್ಳುವ ಆಕರ್ಷಕ ವಸ್ತುಗಳು:** ಚನ್ನಪಟ್ಟಣದ ಮರದ ಗೊಂಬೆಗಳು, ಕೊಪ್ಪಳದ ಕಿನ್ನಾಳ ಆಟದ ಸಾಮಾನುಗಳು, ಮೊಳಕಾಲ್ಮೂರು ಸೀರೆಗಳು, ಇಳಕಲ್ ಸೀರೆಗಳು, ರೇಷ್ಮೆ ಸೀರೆಗಳು, ವಿವಿಧ ಅಕರ್ಷಣೆಯ ಬಟ್ಟೆಗಳು, ನಾರಿನ ಉತ್ಪನ್ನದ ಬ್ಯಾಗ್‌ಗಳು, ಮಸಾಲಾ ಉತ್ಪನ್ನಗಳು, ಸಿರಿ ಧಾನ್ಯ ಉತ್ಪನ್ನಗಳು, ಮೌಲ್ಯವರ್ಧಿತ ಕರಾವಳಿ ಉತ್ಪನ್ನಗಳು, ವಿವಿಧ ಬಗೆಯ ಖಾದಿ ಉತ್ಪನ್ನಗಳು, ಬಾಳೆ ನಾರಿನಿಂದ ಉತ್ಪಾದಿಸಿದ ಉತ್ಪನ್ನಗಳು,ಗೃಹಾಲಂಕಾರಿಕವಸ್ತುಗಳು,ಆಯುರ್ವೇದ ಔಷಧಿಯುತ ಉತ್ಪನ್ನಗಳು, ಪಾರಂಪರಿಕ ವಸ್ತುಗಳು, ಗೃಹೋಪಯೋಗಿ ವಸ್ತುಗಳು, ನವೀನ ವಿನ್ಯಾಸದ ಆಭರಣಗಳು, ಆಹಾರ ಉತ್ಪನ್ನಗಳು.

**ಅಕ್ಕ ಕೆಫೆ ಮಾದರಿ:** ಸರ್ಕಾರವು 2024–25ನೇಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ 50 ಅಕ್ಕ ಕೆಫೆಗಳನ್ನು ಒಂದೇ ಮಾದರಿ ವಿನ್ಯಾಸದಡಿ ಅನುಷ್ಠಾನಗೊಳಿಸಲಾಗುತ್ತಿದೆ. 1200 ಸ್ವ–ಸಹಾಯ ಗುಂಪಿನ ಮಹಿಳೆಯರಿಗೆ ಜೀವನೋಪಾಯಕ್ಕೆ ಅನುಕೂಲ ಕಲ್ಪಿಸಲಾಗುತ್ತಿದೆ.

## ಪ್ರಮುಖ ಸುದ್ದಿ

### ಕರ್ನಾಟಕ ಕ್ರೀಡಾಕೂಟ –2025 ವ್ಯವಸ್ಥಿತ ನಿರ್ವಹಣೆಗೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

# ಮಂಗಳೂರು–ಉಡುಪಿ ಜಿಲ್ಲೆಗಳಲ್ಲಿ ಜನವರಿ 17ರಿಂದ 23ರವರೆಗೆ ಕರ್ನಾಟಕ ಕ್ರೀಡಾಕೂಟ–2025

» ಬೆಂಗಳೂರು

ಕರ್ನಾಟಕ ಕ್ರೀಡಾಕೂಟ–2025 ಅನ್ನು ಮಂಗಳೂರು ಹಾಗೂ ಉಡುಪಿ ಜಿಲ್ಲೆಗಳಲ್ಲಿ ಆಯೋಜಿಸುತ್ತಿದ್ದು ವ್ಯವಸ್ಥಿತ ಏರ್ಪಾಡುಗಳನ್ನುಮಾಡಲುಮಂಗಳೂರು ಹಾಗೂ ಉಡುಪಿ ಜಿಲ್ಲಾಡಳಿತಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಕರ್ನಾಟಕ ಕ್ರೀಡಾಕೂಟ –2025 ವನ್ನು ಜನವರಿ 17ರಿಂದ 23ರವರೆಗೆ ಮಂಗಳೂರು ಮತ್ತು ಉಡುಪಿ ಜಿಲ್ಲೆಗಳಲ್ಲಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಒಲಂಪಿಕ್ ಸಂಸ್ಥೆ ಮತ್ತು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾಡಳಿತ ಸಹಯೋಗದಲ್ಲಿ ಆಯೋಜಿಸಲಾಗುತ್ತಿದೆ.

ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮ ಜನವರಿ 17ರಂದು ಮಂಗಳೂರಿನಲ್ಲಿ ನಡೆಯಲಿದ್ದು ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ.



ಸಮಾರೋಪ ಸಮಾರಂಭ ಉಡುಪಿ ಜಿಲ್ಲೆಯಲ್ಲಿ ನಡೆಯಲಿದ್ದು ಗೃಹ ಸಚಿವರು ಭಾಗಿಯಾಗಲಿದ್ದಾರೆ.

ಸುಮಾರು 25 ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸುತ್ತಿದ್ದು ಕ್ರೀಡಾಕೂಟವನ್ನು ವ್ಯವಸ್ಥಿತವಾಗಿ ಆಯೋಜಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚಿಸಿದರು.

ಕ್ರೀಡಾಕೂಟದಲ್ಲಿ3750ಕ್ರೀಡಾಪಟುಗಳು ಹಾಗೂ 750 ತಾಂತ್ರಿಕ ಅಧಿಕಾರಿಗಳು ಮತ್ತು ಸಂಘಟಕರು ಸೇರಿದಂತೆ ಅಂದಾಜು 4500 ಜನರು ಭಾಗವಹಿಸಲಿದ್ದು ಊಟ –ತಿಂಡಿ,ವಸತಿ , ಸಾರಿಗೆ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳೂರಿನಲ್ಲಿ 12 ಕ್ರೀಡೆಗಳು ಹಾಗೂ ಉಡುಪಿ ಮತ್ತು ಮಣಿಪಾಲಗಳಲ್ಲಿ 11 ಕ್ರೀಡೆಗಳು ಆಯೋಜನೆಗೊಳ್ಳಲ್ಲಿದ್ದು, ಶೂಟಿಂಗ್ ಮತ್ತು ಜಿಮ್ನಾಸ್ಟಿಕ್ ಕ್ರೀಡೆಗಳನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗುವುದು.

*ಕ್ರೀಡಾಕೂಟ ಲಾಂಛನ ಬಿಡುಗಡೆ*

ಕರ್ನಾಟಕ ಕ್ರೀಡಾಕೂಟ–2025ರ ಲಾಂಛನ ಬಿಡುಗಡೆಯನ್ನು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ನೆರವೇರಿಸಿದರು.

ಕ್ರೀಡಾಕೂಟದ ಲೋಗೋದಲ್ಲಿನ ಯಕ್ಷಗಾನ ಕಿರೀಟವು ಕ್ರೀಡಾಕೂಟ ನಡೆಯುವ ಕರಾವಳಿ ಭಾಗದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು,

ತಿಳಿನೀಲಿ ಬಣ್ಣವು ಕಡಲಿನ ಅಗಾಧತೆಯನ್ನು ಜತೆಗೆ ಸೋಲು–ಗೆಲುವು ಗಳಲ್ಲಿ ಕ್ರೀಡಾಪಟುಗಳ ಶಾಂತತೆ ಮತ್ತು ಶ್ರಮವನ್ನು ಪ್ರತಿನಿಧಿಸುವುದಾಗಿ ಅಧಿಕಾರಿಗಳು ವಿವರಿಸಿದರು.

# ದೇಶದಲ್ಲಿಯೇ ಮಾದರಿ ಗ್ರಾಪಂ ಕಟ್ಟಡ ನಿರ್ಮಿಸಿ: ಸಂಸದ ಕಾರಜೋಳ ಸಲಹೆ

» ಚಿತ್ರದುರ್ಗ

ಗ್ರಾಮ ಪಂಚಾಯಿತಿ ನೂತನ ಕಟ್ಟಡಕ್ಕೆ ಎಲ್ಲರಿಂದಲೂ ಅನುದಾನ ಪಡೆದು ದೇಶದಲ್ಲಿಯೇ ಮಾದರಿಯಾಗಿರುವಂತೆ ನಿರ್ಮಿಸಿ ಎಂದು ಸಂಸದ ಗೋವಿಂದ ಎಂ.ಕಾರಜೋಳರವರು ತಿಳಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಮತ್ತು ವಿಧಾನಪರಿಷತ್‌ಸ್ಥಳೀಯಪ್ರದೇಶಾಭಿವೃದ್ಧಿ ಅನುದಾನ ಎಂ.ಜಿ.ಎನ್.ಆರ್.ಇ.ಜಿ.ಎ. ಹದಿನೈದನೆ ಹಣಕಾಸು ಹಾಗೂ ಇನ್ನಿತರೆ ಯೋಜನೆಗಳ ಅನುದಾನದಡಿಯಲ್ಲಿ ದೊಡ್ಡಸಿದ್ದವ್ವನಹಳ್ಳಿಯಲ್ಲಿ ಒಂದು ಕೋಟಿ 25 ಲಕ್ಷ ರೂ.ವೆಚ್ಚದಲ್ಲಿ ನಿರ್ಮಾಣವಾಗಲಿರುವ ಗ್ರಾಮ ಪಂಚಾಯಿತಿ ನೂತನ ಕಟ್ಟಡಕ್ಕೆ ಬುಧವಾರ ಭೂಮಿಪೂಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಎನ್.ಆರ್.ಇ.ಜಿ.ಯಿಂದಲೂ ಕಟ್ಟಡಕ್ಕೆ ಅನುದಾನ ಕೊಡುವ ಅವಕಾಶವಿದೆ. ಸಂಸದರ ಅನುದಾನದಲ್ಲಿ ಹಣದ ನೆರವು ನೀಡುತ್ತೇನೆ. ರೈತರಿಗೆ ಮಾಹಿತಿ ನೀಡುವುದು ಸೇರಿದಂತೆ ಗ್ರಾಮ ಪಂಚಾಯಿತಿಗೆ ಅಗತ್ಯವಾಗಿ ಬೇಕಾಗಿರುವ ಎಲ್ಲಾ ರೀತಿಯ ಸೌಲತ್ತುಗಳು ಸಿಗುವಂತ ರೀತಿಯಲ್ಲಿ ಭವ್ಯವಾದ ಕಟ್ಟಡ ನಿರ್ಮಾಣ ಮಾಡುವಂತೆ ಸಲಹೆ ನೀಡಿದರು.ಬಾಗಲಕೋಟೆ ಜಿಲ್ಲೆಯ ಮಂಟೂರು ಗ್ರಾಮದಲ್ಲಿ ದೇಶಕ್ಕೆ ಮಾದರಿಯಾಗಿರುವಂತ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಿಸಲಾಗಿದೆ. ಅಲ್ಲಿಂದ ಮ್ಯಾಪ್ ತರಿಸಿಕೊಂಡು ನೀವುಗಳು ಅದೇ ರೀತಿಯಲ್ಲಿ ನೂತನ ಕಟ್ಟಡ ನಿರ್ಮಿಸಿ ರಾಷ್ಟ್ರನಾಯಕ ದಿವಂಗತ ಎಸ್.ನಿಜಲಿಂಗಪ್ಪನವರ ಕೊಡುಗೆ ರಾಜ್ಯಕ್ಕೆ ಸಾಕಷ್ಟಿದೆ. ನೂತನ ಕಟ್ಟಡಕ್ಕೆ ಅವರ ಹೆಸರನ್ನಿಡಿ ಎಂದು ಹೇಳಿದರು.

ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಗ್ರಾಮ ಪಂಚಾಯಿತಿ ನೂತನ ಕಟ್ಟಡಕ್ಕೆ ಭೂಮಿಪೂಜೆ ಸಲ್ಲಿಸಿ ಮಾತನಾಡುತ್ತ ಎಸ್.ನಿಜಲಿಂಗಪ್ಪನವರು ರಾಜ್ಯಕ್ಕೆ ಹೇಗೆ ಮಾದರಿ ರಾಜಕಾರಣಿ ಎನಿಸಿಕೊಂಡಿದ್ದರೋ ಅದೇ ರೀತಿ ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಕಟ್ಟಡ ರಾಜ್ಯಕ್ಕೆ ಮಾದರಿಯಾಗಿರುವಂತೆ ನಿರ್ಮಿಸಬೇಕು. ಐದು ನೂರು ಜನ ಕೂರುವಂತ ದೊಡ್ಡ ಸಭಾಂಗಣ, ಸಿಬ್ಬಂದಿಗಳಿಗೆ ಪ್ರತ್ಯೇಕ ಕೋಣೆ, ನಿರ್ಮಿಸಲಾಗುವುದು. ರಾಜಕಾರಣ ಬೇರೆ. ಅಭಿವೃದ್ದಿ ವಿಚಾರ ಬಂದಾಗ ಪಕ್ಷ ಬೇಧ ಮರೆತು ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡೋಣ. ಈ ಪಂಚಾಯಿತಿಗೆ 187 ಮನೆಗಳನ್ನು ಮಂಜೂರು ಮಾಡಲಾಗುವುದು. ನೂತನ ಕಟ್ಟಡಕ್ಕೆ ಶಾಸಕರ ಅನುದಾನದಿಂದ 25 ಲಕ್ಷ ರೂ.ಗಳನ್ನು ನೀಡುತ್ತೇನೆಂದು ಭರವಸೆ ಕೊಟ್ಟರು. ಮುಖ್ಯಮಂತ್ರಿಗಳ ಅನುದಾನದಿಂದ 35 ಲಕ್ಷ ರೂ.ಗಳನ್ನು ನೀಡಲಾಗಿದೆ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿಯಿಂದ ತಲಾ ಮೂರು ಲಕ್ಷ ರೂ.ಗಳನ್ನು ಮಂಜೂರು ಮಾಡಲಾಗಿದೆ. ಸಂಸದರ ಅನುದಾನದಲ್ಲಿಯೂ ಹಣ ಪಡೆಯಲು ಅವಕಾಶವಿದೆ. ಒಟ್ಟಾರೆ ಗ್ರಾಮ ಪಂಚಾಯಿತಿ ಕಟ್ಟಡ ಸುಂದರವಾಗಿ ನಿರ್ಮಾಣವಾಗಬೇಕೆಂದರು.ವಿದ ಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ದೇಶದಲ್ಲಿಯೇ ಈ ಕಟ್ಟಡ ಮಾದರಿಯಾಗಿರಬೇಕು. ಮಕ್ಕಳ ಗ್ರಂಥಾಲಯ, ವಿಶಾಲವಾದ ಸಭಾಂಗಣ, ವಸತಿ ಗೃಹಗುಣಮಟ್ಟದಲ್ಲಿ ನಿರ್ಮಾಣವಾಗಲಿ. ನನ್ನ ಅನುದಾನದಲ್ಲಿಯೂ ಕಟ್ಟಡಕ್ಕೆ 25 ಲಕ್ಷ ರೂ.ಗಳನ್ನು ನೀಡುತ್ತೇನೆ. ಶಾಸಕರು, ಸಂಸದರಿಂದಲೂ ಅನುದಾನ ಸಿಗುತ್ತದೆ. ಎಲ್ಲವನ್ನು ಬಳಸಿಕೊಂಡು ಗಟ್ಟಿಮುಟ್ಟಾಗಿ ನೂತನ ಕಟ್ಟಡವನ್ನು ನಿರ್ಮಾಣ ಮಾಡಿ ಇನ್ನೊಂದು ವರ್ಷದಲ್ಲಿ ಉದ್ಘಾಟನೆಯಾಗಬೇಕೆಂದು ಹೇಳಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವೈ.ರವಿಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೆಚ್.ಟಿ.ಶಶಿಕಲಾ ತಿಪ್ಪೇಸ್ವಾಮಿ ಅಧ್ಯಕ್ಷತೆ ವಹಿಸಿದ್ದರು.ಉಪಾಧ್ಯಕ್ಷೆ ಎಂ.ಜಿ.ವನಿತಾ ಅನಿಲ್‌ಕುಮಾರ್, ಸದಸ್ಯರುಗಳಾದ ಮಾರುತಿ ಎನ್.ಸಲುಘಯ್ಯ, ಕೆ.ಟಿ.ರುದ್ರೇಶ್, ಭಾಗ್ಯಮ್ಮ, ವಿದ್ಯಾವತಿ, ಗಂಗಮ್ಮ, ಕ್ಯಾದಿಗೆರೆ ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಕೆ.ಎಸ್.ಕಲ್ಲೇಶಪ್ಪ, ಸತ್ಯಮ್ಮ, ಟಿ.ಲಕ್ಷ್ಮಿದೇವಿ, ಕಲ್ಲಪ್ಪ, ಎಣ್ಣೆಗೆರೆ, ಕಸವನಹಳ್ಳಿ, ಡಿ.ಕೆ. ಹಟ್ಟಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ, ಕೆ.ಡಿ.ಪಿ.ಸದಸ್ಯ ನಾಗರಾಜ್, ನಗರಸಭೆ ಸದಸ್ಯ ವೆಂಕಟೇಶ್, ಹನೀಸ್, ಪ್ರಕಾಶ್‌ರಾಮನಾಯ್ಕ, ಡಿ.ಎಸ್. ಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷೆ ಸುಧಾ ವೇದಿಕೆಯಲ್ಲಿದ್ದರು. ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಶಿಲ್ಪ ಎನ್. ಕಾರ್ಯದರ್ಶಿಗಳಾದ ಆಶಾ, ಅನುಸೂಯ ಭೂಮಿಪೂಜೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದೈಹಿಕ ಹಲ್ಲೆ, ಶಿಕ್ಷಕ ಅಮಾನತು

» ಹಿರಿಯೂರು

ತಾಲೂಕಿನ ಬಬ್ಬೂರು ಫಾರಂನ ಸರ್ಕಾರಿ ಶಾಲೆಯ ಶಿಕ್ಷಕ ಬಿ.ರಮೇಶ್ ಅವರನ್ನು ಅಮಾನತು ಮಾಡಿ ಕ್ಷೇತ್ರ ಶಿಕ್ಷಣಾಧಿಕಾರಿ ಆದೇಶ ಹೊರಡಿಸಿದ್ದಾರೆ.ಸದರಿ ಶಾಲೆಯಲ್ಲಿ ಬಿ ರಮೇಶ್ ಕಾರ್ಯನಿರ್ವಹಿಸುತ್ತಿದ್ದು 4 ನೇ ತರಗತಿ ವಿದ್ಯಾರ್ಥಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಕಾಲಲ್ಲಿ ತುಳಿದು ಬೆನ್ನಿಗೆ ಬರೆ ಬರುವ ಹಾಗೆ ದೈಹಿಕ ಹಲ್ಲೆ ನಡೆಸಿರುತ್ತಾರೆಂದು ಭಾರತೀಯ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳ ದೂರಿನ ಮೇರೆಗೆ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.ಈ ದೂರಿನ ಸಂಬಂಧವಾಗಿ ದಿನಾಂಕ 23 –12 –2024 ರಂದು ಬಿಐಇಆರ್‌ಟಿ ಅವರೊಂದಿಗೆ ಸ್ಥಳ ಪರಿಶೀಲಿಸಿ ವಿದ್ಯಾರ್ಥಿಗಳ, ಪೋಷಕರ ಹಾಗೂ ಭಾರತೀಯ ದಲಿತ ಸಂಘರ್ಷ ಸಮಿತಿಯವರನ್ನು ಪ್ರತ್ಯೇಕವಾಗಿ ವಿಚಾರಣೆ ನಡೆಸಲಾಗಿದೆ. ಈ ವಿಚಾರಣೆಯಲ್ಲಿ ಸದರಿ ಶಿಕ್ಷಕರು ಮಕ್ಕಳನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು, ವಿದ್ಯಾರ್ಥಿಗಳನ್ನು ದೈಹಿಕವಾಗಿ ಹಲ್ಲೆ ನಡೆಸಿರುವುದು ಕಂಡುಬಂದಿರುತ್ತದೆ. ಮಕ್ಕಳ ಮೇಲೆ ದೌರ್ಜನ್ಯ ಕರ್ತವ್ಯ ಲೋಪವಾಗಿರುತ್ತದೆ. ಇದೇ ರೀತಿ ಈ ಹಿಂದೆ ಹಲವಾರು ವಿದ್ಯಾರ್ಥಿಗಳ ಮೇಲೆ ರಕ್ತ ಬರುವಂತೆ ದೈಹಿಕ ಹಲ್ಲೆಗಳನ್ನು ಮಾಡಿರುವುದು ಪರಿಶೀಲನೆ ಸಂದರ್ಭದಲ್ಲಿ ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಇದರಿಂದಾಗಿ ಶಾಲೆಯ ದಾಖಲಾತಿ ಕುಸಿದಿರುವ ಬಗ್ಗೆ ಗ್ರಾಮಸ್ಥರು ಹೇಳಿಕೆ ನೀಡಿರುತ್ತಾರೆ. ಇವರ ಈ ರೀತಿ ವರ್ತನೆ ಜವಬ್ದಾರಿಯುತ ಶಿಕ್ಷಕರಾಗಿ ಶಿಕ್ಷಕರೊಟ್ಟಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯದಲ್ಲಿ ನಿರ್ಲಕ್ಷತನದಿಂದ ವರ್ತಿಸಿ ಮಕ್ಕಳ ಕಲಿಕೆ ಹಾಗೂ ಶಾಲೆಯ ದಾಖಲಾತಿ ಮತ್ತು ಶಾಲೆಯ ಶೈಕ್ಷಣಿಕ ಪ್ರಗತಿ ಕುಂಠಿತವಾಗಿರಲು ಕಾರಣವಾಗಿರುತ್ತದೆ . ಸದರಿ ಶಿಕ್ಷಕರು ಕರ್ನಾಟಕ ನಾಗರಿಕ ಸೇವಾ ನಿಯಮ 2021ರ ನಿಯಮವನ್ನು ಉಲ್ಲಂಘಿಸಿರುವ ಆರೋಪಕ್ಕೆ ಒಳಗಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು ಮಕ್ಕಳ ಶೈಕ್ಷಣಿಕ ಹಿತ ದೃಷ್ಟಿಯಿಂದ ಇವರನ್ನು ಅಮಾನತ್ತಿನಲ್ಲಿಡಲು ತೀರ್ಮಾನಿಸಿ ಆದೇಶಿಸಲಾಗಿದೆ ಎಂದು ಅಮಾನತು ಆದೇಶದಲ್ಲಿ ತಿಳಿಸಲಾಗಿದೆ.

### ಚೌಳೂರು ಗ್ರಾಮದಲ್ಲಿ ಡಿ.26ರಿಂದ 28 ತನಕ ಶ್ರೀ ವೀರಭದ್ರಸ್ವಾಮಿಯ ಉತ್ಸವ ಜತೆ ರಥೋತ್ಸವ.

» ಪರಶುರಾಂಪುರ



ಸಮೀಪದ ಚೌಳೂರು ಗ್ರಾಮದ ಆರಾಧ್ಯ ದೈವ ಶ್ರೀವೀರಭದ್ರಸ್ವಾಮಿ ದೇವರ ಕಡೇಕಾರ್ತಿಕೋತ್ಸವ ಅಂಗವಾಗಿ ರಥೋತ್ಸವ ಹಾಗೂ ತೆಪ್ಪೋತ್ಸವ ಸೇರಿದಂತೆ ಶ್ರೀ ಆಂಜನೇಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆಯೊಂದಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಡಿ.26 ಗುರುವಾರ ದಿಂದ ಡಿ.28ಶನಿವಾರದ ವರಗೆ ಮೂರು ದಿನಗಳ ಕಾಲ ನಡೆಯುವ ಜಾತ್ರೆಯ ಅಂಗವಾಗಿ ರಥೋತ್ಸವ ಹಾಗೂ ವೇದಾವತಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ಯಾರೇಜ್ ಬಳಿಯಲ್ಲಿ ತೆಪ್ಪೋತ್ಸವ ನಡೆಸಲು ಸಿದ್ದತೆಗಳು ನಡೆಯುತ್ತಿವೆ .ಉತ್ಸವದಲ್ಲಿ ಕೀಲು ಕುದುರೆ,ಲಂಬಾಣಿ ನೃತ್ಯ,ಡೋಳ್ಳು ಕುಣಿತ ,ಚಕ್ಕೆ ಭಜನೆ ಸೇರಿದಂತೆ ವಿವಿಧ ಜಾನಪದ ಕಲಾತಂಡ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಡೆಯಿಲಿವೆ. ಜಾತ್ರೆಯ ಪ್ರಯುಕ್ತ ಗ್ರಾಮದ ದೇವಾಲಯಸೇರಿದಂತೆವಿವಿಧಬೀದಿಗೆಳಿಗೆವಿದ್ಯುತ್ ದೀಪ ಅಲಂಕಾರದ ಮೂಲಕ ಸಜ್ಜುಗೊಳ್ಳಲು ಸಿದ್ಧವಾಗಿದೆ.ಡಿ.26ಗುರುವಾರ ರಂದು ಸ್ವಾಮೀಗೆ ಬೆಳಿಗ್ಗೆ ವೇದಾವತಿನದಿಯಲ್ಲಿ ಗಂಗಾಪೂಜೆ ನಂತರ ರಾತ್ರಿ ದೇವಾಲಯದ ಬಳಿಯಲ್ಲಿ ಕಾರ್ತಿಕೋತ್ಸವ ನಡೆಸಲಾಗುತ್ತದೆ. ಬಳಿಕ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ರಥೋತ್ಸವಕ್ಕೆ ಭಕ್ತಾದಿಗಳು ಹೂವಿನ ಹಾರ ಸಲ್ಲಿಸುವವರು ಬಳಿಕ ರಥೋತ್ಸಕ್ಕೆ ಚಾಲನೆ ದೊರೆಯಲಿದೆ. ಡಿ.27 ಶುಕ್ರವಾರದಂದು ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಆಂಜನೇಯಸ್ವಾಮಿ ಹಾಗೂ ವೀರಭದ್ರದೇವರ ಅಡ್ಡಪಲ್ಲಕ್ಕಿ ಉತ್ಸವ ನಡೆಸಲಾಗುತ್ತದೆ. ಸಂಜೆ 3 ಗಂಟೆ ಸುಮಾರಿಗೆ ವೇದಾವತಿ ಬ್ಯಾರೇಜ್‌ನಲ್ಲಿ ತೆಪ್ಪೋತ್ಸವಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿದೆ. ಸಂಜೆ ಓಕಳಿ ಉತ್ಸವ ಏರ್ಪಡಿಸಲಾಗಿದೆ .ಡಿ.28ಶನಿವಾರದಂದು ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ಕಾರ್ಯಕ್ರಮ ಇದೆ.ಹೀಗೆ ಕಡೇ ಕಲಾರ್ತಿಕೋತ್ಸವ ಅಂಗವಾಗಿ ಮೂರು ದಿನಗಳ ಕಾಲ ವಿವಿಧ ದಾರ್ಮಿಕ ಕಾರ್ಯಧಕ್ರಮಗಳು ಜರುಗಲಿವೆ.

### ಯುವಕನ ಮೇಲೆ ಮಾರಣಾಂತಿಕ ಹಲೆ

» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಚಳ್ಳಕೆರೆಯಿಂದ ಸಿದ್ದಾಪುರಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದ ಎಚ್.ಜಗದೀಶ್(38) ಎಂಬುವವರ ಮೇಲೆ ದಾರಿಯಲ್ಲಿ ಯಾರೋ ಹಲ್ಲೆ ನಡೆಸಿದ್ದು ತಲೆಗೆ ರಕ್ತಗಾಯವಾಗಿದ್ದು ಆತನನ್ನು ಕೂಡಲೇ ಇಲ್ಲಿನ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಮಾಹಿತಿ ಪಡೆದ ಠಾಣ ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ ಹಾಗೂ ಸಿಬ್ಬಂದಿ ವರ್ಗ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಗಾಯಾಳು ಎಚ್.ಜಗದೀಶ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಸಾರ್ಥಕತೆ ಬದುಕಿಗೆ ಯೋಗಪುರುಷ ಬ್ರಹ್ಮಚೈತನ್ಯರ ಆದರ್ಶಗಳನ್ನು ಪಾಲಿಸಿ: ಮಾತಾಜಿ ತ್ಯಾಗಮಯಿ

» ಚಳ್ಳಕೆರೆ

ಪ್ರತಿಯೊಬ್ಬ ವ್ಯಕ್ತಿಯೂ ಧಾರ್ಮಿಕ ಭಾವನೆಗಳನ್ನು ಗೌರವಿಸಿದರೆ ಮಾತ್ರ ಉತ್ತಮ ಬದುಕನ್ನು ರೂಪಿಸಿಕೊಳ್ಳಲು ಸಾಧ್ಯ. ಸಂಸ್ಕೃತಿ ಮತ್ತು ಸಂಸ್ಕಾರ ನಮ್ಮ ಬದುಕಿನ ಅವಿಭಾಜ್ಯ ಅಂಗ. ಯಾವ ವ್ಯಕ್ತಿಯಲ್ಲಿ ಎರಡೂ ಮಿಳಿತವಾಗುತ್ತವೆಯೋ ಅವನು ಧಾರ್ಮಿಕವಾಗಿ ಜಾಗೃತನಾಗುತ್ತಾನೆ. ಸಮಾಜಕ್ಕೆ ಉತ್ತಮ ಕೊಡುಗೆ ನೀಡಬಲ್ಲ ಶಕ್ತಿ, ಸಾಮರ್ಥ್ಯ ಪಡೆಯುತ್ತಾನೆ.

ಯೋಗಪುರುಷ ಬ್ರಹ್ಮಚೈತನ್ಯರೂ ಸಹ ವ್ಯಕ್ತಿಯ ಪರಿವರ್ತನೆಯ ಮೂಲಕ ಸಮಾಜ ಬದಲಾವಣೆಗೆ ನಾಂದಿಯಾಡಿದರು ಎಂದು ಶಾರದಾಶ್ರಮದ ಮಾತಾಜಿ ತ್ಯಾಗಮಯಿ ತಿಳಿಸಿದರು.

ಅವರು, ಬುಧವಾರ ತ್ಯಾಗರಾಜ ನಗರ ದತ್ತಮಂದಿರದಲ್ಲಿ ಬ್ರಹ್ಮಚೈತನ್ಯ ಮಂಡಳಿ ಹಮ್ಮಿಕೊಂಡಿದ್ದ ಬ್ರಹ್ಮಚೈತನ್ಯ 111ನೇ ಆರಾಧನೆಯಲ್ಲಿ ಪಾಲ್ಗೊಂಡು ನೆರೆದಿದ್ದ ಭಕ್ತರಿಗೆ ಬ್ರಹ್ಮಚೈತನ್ಯರ ಸಾಧನೆಯ ಬಗ್ಗೆ ಮಾಹಿತಿ ನೀಡಿದರು. ಪ್ರತಿವರ್ಷವೂ ನಾವು ಬ್ರಹ್ಮಚೈತನ್ಯರ ಆರಾಧನೆಯನ್ನು ಭಕ್ತಿ ಶ್ರದ್ದೆಯಿಂದ ಮಾಡುತ್ತಾ ಬಂದಿದ್ದೇವೆ. ಇಂತಹ ಕಾರ್ಯಕ್ರಮದಲ್ಲಿ ಪಾಲ್ಗೊಂಡಾಗ ಮಾತ್ರ ನಮ್ಮಲ್ಲಿನ ಕೆಟ್ಟಗುಣಗಳು ನಮ್ಮಿಂದ ದೂರವಾಗುತ್ತವೆ. ಉತ್ತಮ ಕೆಲಸ ಕಾರ್ಯಗಳಿಂದ ಮಾತ್ರ ಸಾರ್ಥಕತೆ ಬದುಕನ್ನು ರೂಪಿಸಿಕೊಳ್ಳಬಹುದು ಎಂದರು.



ಬ್ರಹ್ಮಚೈತನ್ಯಮಂಡಳಿ ಅಧ್ಯಕ್ಷ ಪಿ.ರವೀಂದ್ರನಾಥ, ಕಾರ್ಯದರ್ಶಿ ಪ್ರಶಾಂತ್, ಪಿ.ವಿ.ಸುಬ್ಬಯ್ಯಶೆಟ್ಟಿ, ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್, ಡಾ.ಬಾಲಾಜಿವೆಂಕಟೇಶ್, ಸಿ.ಎಸ್.ಗೋಪಿನಾಥ, ಎಂ.ಸುಬ್ಬರಾವ್, ರಾಮಕೃಷ್ಣರಾವ್, ಸುಮಪ್ರಕಾಶ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಪುನರ್ ಪಾವತಿ ಅವಧಿ ಕಡಿತಗೊಳಿಸುವಂತೆ ಮನವಿ



» ಚಿತ್ರದುರ್ಗ

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಮತ್ತು ಕಾಲೇಜುಗಳ ನಿವೃತ್ತ ಪ್ರಾಧ್ಯಾಪಕರುಗಳ ಸಂಘದ ಫೆಡರೇಶನ್ ಜಿಲ್ಲಾ ಘಟಕದ ವತಿಯಿಂದ ಕಮ್ಯುಟೇಷನ್ ಪುನರ್ ಪಾವತಿ 15 ವರ್ಷಗಳ ಅವಧಿಯನ್ನು 12/13 ವರ್ಷಗಳಿಗೆ ಕಡಿತಗೊಳಿಸುವಂತೆ ಸಂಸದ ಗೋವಿಂದ ಎಂ.ಕಾರಜೋಳರವರಿಗೆ ಬುಧವಾರ ಮನವಿ ಸಲ್ಲಿಸಲಾಯಿತು.

ಗುಜರಾತ್ ರಾಜ್ಯದ ಮಾದರಿಯಂತೆ ಕಮ್ಯುಟೇಶನ್ ಪುನರ್ ಪಾವತಿಯನ್ನು 15 ವರ್ಷಗಳಿಂದ 12/13 ವರ್ಷಗಳಿಗೆ ಕಡಿತಗೊಳಿಸಿ ಪುನರ್ ಪಾವತಿ ಪದ್ದತಿಯನ್ನು ಜಾರಿಗೆ ತರುವಂತೆ ಸಂಸದರಲ್ಲಿ ಮನವಿ ಮಾಡಿದ ನಿವೃತ್ತ ಪ್ರಾಧ್ಯಾಪಕರುಗಳು ದೇಶದ ಪ್ರಧಾನಿ ನರೇಂದ್ರಮೋದಿರವರ ಗಮನಕ್ಕೆ ತರುವಂತೆ ವಿನಂತಿಸಿದರು.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಮತ್ತು ಕಾಲೇಜುಗಳ ನಿವೃತ್ತ ಪ್ರಾಧ್ಯಾಪಕರುಗಳ ಸಂಘದ ಫೆಡರೇಶನ್ ಜಿಲ್ಲಾ ಘಟಕದ ಅಧ್ಯಕ್ಷ ಪ್ರೊ.ಟಿ.ಹೆಚ್.ಕೃಷ್ಣಮೂರ್ತಿನಿವೃತ್ತ ಪ್ರಾಚಾರ್ಯರಾದ ಸಿ.ಎಂ. ಚಂದ್ರಪ್ಪ, ಡಾ.ನಟರಾಜ್, ಡಾ.ಪ್ರಭುದೇವ್, ಡಾ.ಗೋಪಾಲಪ್ಪ, ಡಾ.ಗಂಗಾಧರಮಠ್, ಪ್ರೊ.ನಾಗರಾಜ್, ಪ್ರೊ.ವಿ.ಟಿ.ಹಿರೇಮಠ್‌ಪ್ರೊ. ಮಕ್ಸೂದ್ ಇವರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ನಾಮನಿರ್ದೇಶಿತ ಸದಸ್ಯ ಸ್ಥಾನಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆ ಉಪವಿಭಾಗದ ಮಟ್ಟದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು(ದೌರ್ಜನ್ಯ ಮತ್ತು ನಿಯಂತ್ರಣ) ಹಾಗೂ ಮ್ಯಾನ್ಯುಯಲ್ ಸ್ಕಾವೆಂಜರ್ ನೇಮಕಾತಿ ನಿಷೇಧ ಮತ್ತು ಪುರ್ನವಸತಿ ಅಧಿನಿಯಮ 2013ರ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಗೆ ನಾಮನಿರ್ದೇಶಿತ ಸದಸ್ಯ ಸ್ಥಾನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಪುರ್ನವಸತಿ ಅಧಿನಿಯಮ 2013ರ ಸ್ಥಾನಕ್ಕೆ ಪೌರ ಕಾರ್ಮಿಕರ, ಸಫಾಯಿ ಕರ್ಮಚಾರಿಗಳ ಏಳಿಗೆಗಾಗಿ ಸೇವೆ ಸಲ್ಲಿಸುತ್ತಿರುವ ಪರಿಶಿಷ್ಟ ಜಾತಿಯ ಆಸಕ್ತ ಪುರುಷ, ಮಹಿಳೆಯರು ಡಿ.26 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಕಚೇರಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಚಳ್ಳಕೆರೆ ವೃತ್ತ ವ್ಯಾಪ್ತಿಯಲ್ಲಿ ಮತ್ತೆ ಕಳ್ಳತನ ಪ್ರಕರಣಗಳ ಸದ್ದು

# ನಾಲ್ಕು ಮನೆಗಳ ಬೀಗ ಒಡೆದ ಕಳ್ಳರು: ಜಮೀನಿನಲ್ಲಿದ್ದ ಶ್ರೀಗಂಧ ಮರ ಕಳವು

» ಚಳ್ಳಕೆರೆ

ಚಳ್ಳಕೆರೆ ವೃತ್ತ ವ್ಯಾಪ್ತಿಯಲ್ಲಿ ಇತ್ತೀಚಿನ ದಿನಗಳಲ್ಲಿ ಕಳ್ಳತನ ಪ್ರಕರಣಗಳು ಆರಂಭವಾಗಿದ್ದು, ಸಾರ್ವಜನಿಕರು ಭಯಭೀತರಾಗಿದ್ದಾರೆ. ಠಾಣಾ ವ್ಯಾಪ್ತಿಯ ಚಿಕ್ಕೇನಹಳ್ಳಿ ಗ್ರಾಮದಲ್ಲಿ ಬಾರೊಂದರ ಬೀಗ ಮುರಿದು ಒಳನುಗ್ಗಿದ ಕಳ್ಳರು ಬಾರಿನಲ್ಲಿ ಏನು ಸಿಗದ ಕಾರಣ ಹೊರಬಂದು ಅಲ್ಲೇ ಇದ್ದ ನಾಲ್ಕು ಮನೆಗಳ ಬೀಗವನ್ನು ಮುರಿದು ಕಳ್ಳತನಕ್ಕೆ ಯತ್ನಿಸಿದ ಸಂದರ್ಭದಲ್ಲಿ ನಾಯಿಗಳು ಬೊಗಳುವುದನ್ನು ಕಂಡು ಅಲ್ಲಿಂದ ಪರಾರಿಯಾಗಿದ್ದಾರೆ. ಗ್ರಾಮದ ಶ್ರೀರಂಗಪ್ಪ, ಹೇಮಂತ, ಯಶವಂತಕುಮಾರ್, ಮರಸಜ್ಜಿ ಮನೆಗಳ ಬೀಗವನ್ನು ಕಳ್ಳರು ಒಡೆದಿದ್ದಾರೆ. ಆದರೆ ಈ ಬಗ್ಗೆ ಪೊಲೀಸರಿಗೆ ಯಾರೂ ದೂರು ನೀಡಿಲ್ಲ.

ಚಿಕ್ಕೇನಹಳ್ಳಿ ಗ್ರಾಮಕ್ಕೆ ಕೆಲವೇ ಮೀಟರ್ ದೂರವಿರುವಹುಲಿಕುಂಟೆಬೋವಿಕಾಲೋನಿಯ ಎಚ್.ವೀರೇಶ್ ಎಂಬುವವರ ಜಮೀನಿನಲ್ಲಿದ್ದ ನಾಲ್ಕು ಗಂಧ ಮರಗಳನ್ನು ಯಾರೋ ಕಳ್ಳರು ಕಡಿದುಹೊಂಡು ಹೋಗಿರುತ್ತಾರೆ.



ಕಳವಾದ ಗಂಧದ ಮರ ಮೌಲ್ಯ ಅಂದಾಜು 50 ಸಾವಿರ ಎನ್ನಲಾಗಿದ್ದು, ಈ ಬಗ್ಗೆ ಪೊಲೀಸರಿಗೆ ದೂರು ನೀಡಲಾಗಿದೆ. ಠಾಣಾಧಿಕಾರಿ ಶ್ರೀನಿವಾಸ್ ಪ್ರಕರಣದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಜಿಲ್ಲಾ ಮಟ್ಟದ ಯೋಗ ಶಿಕ್ಷಕರ ಕಾರ್ಯಗಾರ; ನಿತ್ಯಯೋಗದಿಂದ ರೋಗದಿಂದ ದೂರ: ಉಮೇಶ್



» ಚಳ್ಳಕೆರೆ

ಪತಂಜಲಿ ಯೋಗಶಿಕ್ಷಣ ಸಮಿತಿ ಪತಂಜಲಿ ಯೋಗ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಸಹಯೋಗದೊಂದಿಗೆ ನಗರದ ಪತಂಜಲಿ ಯೋಗ ಶಿಕ್ಷಣ ಕೇಂದ್ರದಿಂದ ಜಿಲ್ಲಾ ಮಟ್ಟದ ಯೋಗ ಶಿಕ್ಷಕರ ಕಾರ್ಯಗಾರ ಹಾಗೂ ಅಗ್ನಿಹೋತ್ರ ಕಾರ್ಯಗಾರವನ್ನು ವಿಶ್ವಕರ್ಮ ಕಲ್ಯಾಣಮಂಟಪದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಸಂಚಾಲಕ ಉಮೇಶ್ ಮಾತನಾಡಿ, ಯೋಗದ ಇತಿಹಾಸವನ್ನು ಅವಲೋಕಿಸಿದಾಗ ಇಂತಹ ಸುಧೀರ್ಘವಾದ ಆರೋಗ್ಯವನ್ನು ಸಂರಕ್ಷಣೆ ಮಾಡಿಕೊಳ್ಳುವ ಪದ್ದತಿ ಮತ್ತೊಂದಿಲ್ಲ. ಪ್ರತಿನಿತ್ಯ ಎರಡು ಹೊತ್ತು ಯೋಗದಲ್ಲಿ ನಿರತನಾದರೆ ಯಾವುದೇ ರೋಗಗಳಿಂದ ದೂರವಿರಬಹುದು. ಅನಾರೋಗ್ಯ ಎಂಬ ಪ್ರಶ್ನೆ ಉದ್ಭವಿಸುವುದಿಲ್ಲ. ಸಾಮಾನ್ಯವಾಗಿ ಯೋಗದಲ್ಲಿ ನಿರತರಾದವರು ಮಿತವ್ಯಯ ಆಹಾರ ಸೇವನೆ ಮತ್ತು ಪರಿಶ್ರಮದ ಬದುಕು ರೂಪಿಸಿಕೊಂಡಿರುತ್ತಾರೆ. ನಿತ್ಯ ಯೋಗದಿಂದ ಶರೀರದಲ್ಲಿರುವ ಎಲ್ಲಾ ಆಲಸ್ಯ ದೂರವಾಗಿ ಕ್ರಿಯಾಶೀಲತೆ ಉಂಟಾಗುತ್ತದೆ. ಯೋಗ ಶಿಕ್ಷಕ ಬಂಧುಗಳು ಯೋಗವನ್ನು ಕಲಿಸುವ ಸಂದರ್ಭದಲ್ಲಿ ಎಲ್ಲಾ ರೀತಿಯ ಯೋಗಾಸನಗಳನ್ನು ತಪ್ಪದೆ ಅಭ್ಯಾಸ ಮಾಡಿಸಿಬೇಕು ಎಂದರು. ಕಾರ್ಯಕ್ರಮದಲ್ಲಿ ಹಿರಿಯೂರು ಸಂಚಾಲಕ ಚಂದ್ರಕಾಂತ್, ಹೊಸದುರ್ಗ ಸಂಚಾಲಕ ರವಿಚಂದ್ರನ್, ಚಿತ್ರದುರ್ಗ ಸಂಚಾಲಕ ರಾಮಲಿಂಗಪ್ಪ, ವಲಯ ಶಿಕ್ಷಣ ಪ್ರಮುಖ ಆರ್.ಮನೋಹರ ಮುಂತಾದವರು ಶಿಬಿರದಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದಲ್ಲೂ ಸಹ ಮಲಹೋರಿಸಿದ ಪ್ರಕರಣ: ಒಟ್ಟು ಏಳು ಜನರ ವಿರುದ್ಧ ಪ್ರಕರಣ ದಾಖಲು

» **ಚಳ್ಳಕೆರೆ**

ಚಳ್ಳಕೆರೆ ನಗರಸಭೆ ವ್ಯಾಪ್ತಿಯ ಹಳೇಟೌನ್‌ನ ಶಾನುಭೋಗರ ಬೀದಿ ಮತ್ತು ಪಾವಗಡ ರಸ್ತೆಯ ಶ್ರೀಗುರುರಾಘವೇಂದ್ರ ಕಲ್ಯಾಣಮಂಟಪದಲ್ಲಿ ಕಾನೂನು ವಿರುದ್ದವಾಗಿ ಶೌಚಾಲಯದ ಮಲವನ್ನು ಮನುಷ್ಯರಿಂದ ತೆಗೆಸಿದ ಹಿನ್ನೆಲೆಯಲ್ಲಿ ಎರಡೂ ಪ್ರಕರಣಗಳನ್ನು ದಾಖಲಿಸಲಾಗಿದೆ.ನಗರದ ಹಳೇಟೌನ್‌ನ ಶಾನುಭೋಗರ ಬೀದಿಯಲ್ಲಿರುವ ರುದ್ರಮುನಿಸ್ವಾಮಿ ತಮ್ಮ ವಾಸದಮನೆಗೆ ಅಳವಡಿಸಿದರುವ ಮಲದ ಗುಂಡಿಯನ್ನು ಯಂತ್ರೋಪಕರಣ ಬಳಸದೆ ಅವೈಜ್ಞಾನಿಕವಾಗಿ ಪರಿಶಿಷ್ಟ ಜಾತಿಯವರಿಂದ ಸ್ವಚ್ಚಗೊಳಿಸಿದ ಹಿನ್ನೆಲೆಯಲ್ಲಿ ಅವರ ವಿರುದ್ದ ಜಿಲ್ಲಾ ಮ್ಯಾನುಯಲ್ ಸ್ಕ್ಯಾವೆಂಜರ್ಸ್- ಸಫಾಯಿಕರ್ಮಚಾರಿಗಳ ಸೇವಾ ಸಮಿತಿ ದೂರು ನೀಡಿದ ಹಿನ್ನೆಲೆಯಲ್ಲಿ ಪ್ರಕರಣ ದಾಖಲು ಮಾಡಲಾಗಿರುತ್ತದೆ. ರುದ್ರಸ್ವಾಮಿ ಇತರೆ ಐದು ಜನರ ಮೇಲೆ ಪ್ರಕರಣ ದಾಖಲಾಗಿದೆ. ನಗರಸಭೆಯ ಕಂದಾಯ ನಿರೀಕ್ಷಕ ಓ.ಮಂಜುನಾಥ ದೂರು ನೀಡಿರುತ್ತಾರೆ. ಮತ್ತೊಂದು ಪ್ರಕರಣದಲ್ಲಿ ಪಾವಗಡ ರಸ್ತೆಯ ಗುರುರಾಘವೇಂದ್ರ ಕಲ್ಯಾಣಮಂಟಪದ ಆವರಣದಲ್ಲಿರುವ ಮಲದಗುಂಡಿಯನ್ನು ಸ್ವಚ್ಚಗೊಳಿಸುವ ಸಂದರ್ಭದಲ್ಲಿ ರಂಗಸ್ವಾಮಿ(48) ಬಿದ್ದು ಮೃತಪಟ್ಟಿದ್ದು, ಕಲ್ಯಾಣಮಂಟಪದ ಮಾಲೀಕ ಜೆ.ಗುರುವೀರನಾಯಕರ ವಿರುದ್ದ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಕಂದಾಯ ನಿರೀಕ್ಷಕ ಕೆ.ಗುರುಪ್ರಸಾದ್ ದೂರು ನೀಡಿದ್ದು, ಪಿಎಸ್‌ಐ ಕೆ.ಸತೀಶ್‌ನಾಯ್ಕ ಎರಡೂ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ. ಘಟನಾ ಸ್ಥಳಕ್ಕೆ ನೈರ್ಮಲ್ಯ ಇಂಜಿನಿಯರ್ ಸೇರಿದಂತೆ ನಗರಸಭೆಯ ಕಂದಾಯ ನಿರೀಕ್ಷಕರು ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಅದ್ದೂರಿಯಾಗಿ ನಡೆದ ಮಹೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

» **ಹೊಸದುರ್ಗ**


ತಾಲ್ಲೂಕಿನ ಕಂಗುವಳ್ಳಿ ಗ್ರಾಮದಲ್ಲಿ ನೆಲೆಸಿರುವ ರಾಮಲಿಂಗೇಶ್ವರ ಸ್ವಾಮಿ ಅಪ್ಪಣೆ ಮೇರೆಗೆ ಮಹೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಮಂಗಳವಾರ ಅತ್ಯಂತ ವಿಜೃಂಭಣೆಯಿಂದ ನಡೆಯಿತುಸೋಮವಾರ ಬೆಳಗ್ಗೆ 7 ಗಂಟೆಗೆ ಧ್ವಜಾರೋಹಣ ನೆರವೇರಿತು. ಕಡೂರು ತಾಲ್ಲೂಕಿನ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಪೂಜಾ ಕಾರ್ಯಗಳು ಧಾರ್ಮಿಕ ವಿಧಿಗಳನ್ವಯ ನಡೆದವು. ಸಂಜೆ ಸಕಲ ವಾದ್ಯ ಮೇಳಗಳ ಸಮ್ಮುಖದಲ್ಲಿ ರಾಮಲಿಂಗೇಶ್ವರ ಸ್ವಾಮಿಯ ಬೆಳ್ಳಿ ಮಂಟಪದ ಉತ್ಸವ ಅತ್ಯಂತ ಗಾಂಭೀರ್ಯದಿಂದ ಸಾಗಿತು. ಕೋಡಿರಾಮಲಿಂಗೇಶ್ವರ ಸ್ವಾಮಿ ವೀರಗಾಸೆ ತಂಡದವರು ಆಕರ್ಷಕವಾಗಿ ವೀರಗಾಸೆ ಪ್ರದರ್ಶಿಸಿದರು. ರಾತ್ರಿ 8 ರಿಂದ ಆರಂಭವಾದ ಗುಗ್ಗಳ ಸೇವೆ (ತಲೆ ಮೇಲೆ ಸಣ್ಣ ಮಡಿಕೆ ಹೊತ್ತು, ಅದರಲ್ಲಿ ಕರ್ಪೂರ, ಕೊಬ್ಬರಿ ಹಾಕುವುದು ವಾಡಿಕೆ). ರಾತ್ರಿ 11.30 ವರೆಗೂ ಸಾಗಿತು. ಸುಮಾರು 8 ರಿಂದ 10 ಸಾವಿರ ಜನರು ಆಗಮಿಸಿದ್ದರೆಂದು ಗ್ರಾಮಸ್ಥರು ತಿಳಿಸಿದರು. ರಾತ್ರಿ 12.30 ಕ್ಕೆ ರಾಮಲಿಂಗೇಶ್ವರ ಸ್ವಾಮಿಯನ್ನು ತೋಟಕ್ಕೆ ಕರೆದೊಯ್ಯಲಾಯಿತು. ಮಂಗಳವಾರ ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ತೋಟದಲ್ಲಿ ರಾಮಲಿಂಗೇಶ್ವರ ಸ್ವಾಮಿಯ ಆದೇಶದ ಮೇರೆಗೆ ಪ್ರಭುಕುಮಾರ ಸ್ವಾಮೀಜಿ ಅವರ ನೇತೃತ್ವದಲ್ಲಿ ಗದ್ದುಗೆ ಸ್ಥಾಪಿಸಲಾಯಿತು. ಈ ಪ್ರದೇಶದಲ್ಲಿ ಕೇವಲ 5 ಅಡಿ ತೋಡಿದರೆ ನೀರು ಬರುತ್ತದೆ. ಮಹೇಶ್ವರ ಸ್ವಾಮಿ ನೀರಿನ ರೂಪದಲ್ಲಿ ಭಕ್ತರಿಗೆ ದರ್ಶನ ನೀಡುವರು. ನಂತರ ಅದಕ್ಕೆ ಗಂಗಾಪೂಜೆ ನೇರವೇರಿಸಿ, ಗದ್ದುಗೆ ಸ್ಥಾಪಿಸಲಾಯಿತು. ನಂತರ ಹಾಲು, ಅನ್ನ, ಬೆಲ್ಲ, ತುಪ್ಪ, ಬಾಳೇಹಣ್ಣು ಸೇರಿಸಿ, ಪ್ರಸಾದ ತಯಾರಿಸಿ ಬಂದ ಎಲ್ಲಾ ಭಕ್ತರಿಗೂ ವಿತರಿಸಲಾಯಿತು. ಬೆಳ್ಳಿಗ್ಗೆ 6 ರಿಂದ ಆರಂಭವಾದ ಪ್ರಸಾಧ ವಿತರಣೆ ರಾತ್ರಿ 10 ವರೆಗೂ ನಡೆಯಿತು. ಬುಧವಾರವೂ ಸಹ ಭಕ್ತರಿಗೆ ಪ್ರಸಾದ ವಿತರಣೆ ನಡೆಯಿತು. ಜಾತ್ರಾ ಮಹೋತ್ಸವಕ್ಕೆ ಆಲಘಟ್ಟ, ಪೀಲಾಪುರ, ಸಾಣೇಹಳ್ಳಿ, ಶೆಟ್ಟಿಹಳ್ಳಿ, ತಾಳ್ಯ, ಅಜ್ಜಂಪುರ, ಸೊಕ್ಕೆ, ಅಂತರಘಟ್ಟೆ, ಬಾಗೂರು, ಬೋಕಿಕೆರೆ, ಎಂ.ಜಿ. ದಿಬ್ಬ, ಮಾಚೇನಹಳ್ಳಿ, ಕಡದಿನಕೆರೆ, ಮೆಟ್ಟಿಲಹೊಳೆ, ಆಲಘಟ್ಟ, ಕೊರಟಿಕೆರೆ, ಕಲ್ಕೆರೆ, ಚಿಕ್ಕಮಗಳೂರು, ದಾವಣಗೆರೆ ಸೇರಿದಂತೆ ವಿವಿಧೆಡೆ ಸಾವಿರಾರು ಭಕ್ತರು ಆಗಮಿಸಿದ್ದರು. ಬುಧವಾರ ರಸ್ತು (ಕಾಣಿಕೆ) ಸಮರ್ಪಿಸುವ ಕಾರ್ಯಕ್ರಮ ನಡೆಯಿತು.

### ತಾಂತ್ರಿಕ ವ್ಯವಸ್ಥಾಪಕರ ನೇಮಕಾತಿಗೆ ಅರ್ಜಿ

» **ದಾವಣಗೆರೆ**

ಆತ್ಮ ಯೋಜನೆಯಡಿ ನೇರ ಗುತ್ತಿಗೆ ಆಧಾರದ ಮೇಲೆ ಚನ್ನಗಿರಿ ತಾಲ್ಲೂಕಿನ ತಾಂತ್ರಿಕ ವ್ಯವಸ್ಥಾಪಕರನ್ನು ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಜಂಟಿ ಕೃಷಿ ನಿರ್ದೇಶಕರು ಕಚೇರಿಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ 2025 ಜನವರಿ 8 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ಯೋಜನಾ ನಿರ್ದೇಶಕರ ಮೊ.ಸಂ:9844313707 ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಮಹಿಳೆಯರು ಅರ್ಥಿಕವಾಗಿ ಸಬಲರನ್ನಾಗಿ ಮಾಡುವುದು ನಮ್ಮ ಗುರಿ: ವಿರೇಂದ್ರ ಹೆಗ್ಗಡೆ



» **ಚಿತ್ರದುರ್ಗ**

ಮಹಿಳೆಯರು ಅರ್ಥಿಕವಾಗಿ ಸಬಲರನ್ನಾಗಿ ಮಾಡುವುದು ನಮ್ಮ ಗುರಿಯಾಗಿದೆ, ಇದನ್ನು ಮಾಡುವುದಕ್ಕಾಗಿ ಸಂಘಗಳನ್ನು ಸ್ಥಾಪನೆ ಮಾಡುವುದರ ಮೂಲಕ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲಾಗುತ್ತಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವಿರೇಂದ್ರ ಹೆಗ್ಗಡೆ ತಿಳಿಸಿದರು.

ಹೊಳಲ್ಕೆರೆ ನಗರದಲ್ಲಿ ನೂತನವಾಗಿ ನಿರ್ಮಾಣ ಮಾಡಲಾದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭೀವೃದ್ದಿ ಯೋಜನೆ ಬಿ.ಸಿ.ಟ್ರಸ್ಟ್‌ನ ವಿಕಾಸ ಸೌಧ ಹಾಗೂ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾನವನ್ನು ತೃಪ್ತಿ ಪಡಿಸಲು ಅನ್ನದಿಂದ ಮಾತ್ರ ಸಾಧ್ಯವಿದೆ ಬೇರೆ ಏನನ್ನಾದರೂ ನೀಡದರು ಸಹಾ ಇನ್ನೂ ಬೇಕು ಎನ್ನಲಾಗುತ್ತದೆ, ನಮ್ಮ ಸಂಸ್ಥೆಯವತಿಯಿಂದ ಅನ್ನದಾನ ವಿದ್ಯಾದಾನ, ಆರೋಗ್ಯ ಹಾಗೂ ಅಭಯವನ್ನು ನೀಡುವಂತ ಕಾರ್ಯವನ್ನು ಮಾಡಲಾಗುತ್ತದೆ. ಜನತೆ ಸ್ವಯಂ ಉದ್ಯೋಗಿಗಳಾಗಲು ವಿವಿಧ ರೀತಿಯ ತರಬೇತಿಯನ್ನು ನೀಡುವುದರ ಮೂಲಕ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲಾಗುತ್ತಿದೆ. ಜನತೆ ಸ್ವಾವಲಂಬಿಗಳಾಗುವುದು ಮೂಲಕ ತಮ್ಮ ಬಡತವನ್ನು ನಿವಾರಣೆಯನ್ನು ಮಾಡಿಕೊಳ್ಳಬೇಕಿದೆ ಎಂದರು.

ಜನರಿಗೆ ಏನು ಬೇಕೆಂದರೆ ನಮಗೆ ಹಣವನ್ನು ನೀಡಿ ಸಾಕು ಎನ್ನುತ್ತಿದ್ದಾರೆ ಆದರೆ ಹಣದಿಂದ ಏನು ಮಾಡಲು ಸಾಧ್ಯವಿಲ್ಲ, ಇಂದಿನ ದಿನಮಾನದಲ್ಲಿ ನಮಗೆ ನೆಮ್ಮದಿ, ತೃಪ್ತಿ ಅಗತ್ಯವಾಗಿದೆ. ನಮ್ಮಲ್ಲಿನ ಸ್ವಸಹಾಯ ಸಂಘದ ಸದಸ್ಯರನ್ನು ತಮ್ಮ ಸಂಸ್ಥೆಯಲ್ಲಿ ಪಾಲುದಾರರನ್ನಾಗಿ ಮಾಡಿಕೊಳ್ಳಲಾಗಿದೆ ಯಾವ ಸಂಸ್ಥೆಯಲ್ಲಿಯೂ ಸಹಾ ಈ ರೀತಿ ಇಲ್ಲ, ನಾವು ಬಂಡವಾಳವನ್ನು ನೀಡುತ್ತೇವೆ ನೀವುಗಳು ಶ್ರಮವನ್ನು ಹಾಕುವುದರ ಮೂಲಕ ಉತ್ತಮವಾದ ಬದುಕನ್ನು ನಡೆಸಬೇಕಿದೆ, ಜನ ಈ ಮುಂಚೆ ಕೃಷಿಗೆ ಭೂಮಿ, ಜಾನುವಾರು, ಸಹಾಯವನ್ನು ಕೇಳುತ್ತಿದ್ದರು ಆದರೆ ಈಗ ಹಳ್ಳಿಗಳಲ್ಲಿಯೂ ಬೈಕ್‌ಗಳ ಷೊ ರೂಂ ಹಾಗೂ ಬಂಗಾರದ ಅಂಗಡಿಗಳು ಬಂದಿವೆ, ಇದರಿಂದ ತಿಳಿಯುತ್ತದೆ ನಮ್ಮ ಜನತೆ ಮುಂದುವರೆದಿದ್ದಾರೆ ಎಂದು ಅವರು, ಇಂದು ಮಹಿಳೆಯರು ಜಾಗೃತರಾಗಿದ್ದಾತರೆ ಆವರು ಅರ್ಥಿಕವಾಗಿ ಸ್ವಾವಲಂಬಿಗಳಾಗಲು ನಮ್ಮ ಸಂಸ್ಥೆ ನೆರವಾಗಿದೆ. ಅವರನ್ನು ಮನೆಯ ಆರ್ಥಿಕ ಮಂತ್ರಯನ್ನಾಗಿ ಮಾಡಲಾಗುತ್ತಿದೆ ಎಂದರು.

ಮಹಿಳೆಯರ ಮೇಲೆ ಆಪಾರವಾದ ನಂಬಿಕೆ ಇದೆ ಅವರಿಗೆ ಸಾಲವನ್ನು ನೀಡಿದರೆ ವಾಪಾಸ್ಸು ಬರುತ್ತದೆ ಎಂಬ ನಂಬಿಕೆ ಇದೆ. ಅವರು ಪಡೆದ ಸಾಲವನ್ನು ಸರಿಯಾಗಿ ಉಪಯೋಗವನ್ನು ಮಾಡುತ್ತಾರೆ ಅದೇ ರೀತಿ ವಾಪಸ್ಸು ಮಾಡುತ್ತಾರೆ ಇದರಿಂದ ನಾವು ಅಲ್ಲದೆ ಬ್ಯಾಂಕ್‌ಗಳು ಸಹಾ ಮಹಿಳೆಯರಿಗೆ ಸಾಲವನ್ನು ನೀಡಲು ಮುಂದಾಗಿದೆ. ನಮ್ಮಲ್ಲಿ ಸ್ವಸಹಾಯ ಸಂಘಗಳಲ್ಲಿ ಪ್ರತಿ ವರ್ಷ ರೇಟಿಂಗ್ ನೀಡಲಾಗುತ್ತದೆ ಇದರಲ್ಲಿ ಉತ್ತಮವಾಗಿ ಕೆಲಸವನ್ನು ಮಾಡುವ ಸಂಘಗಳಿಗೆ ಲಾಭಾಂಶವನ್ನು ನೀಡಲಾಗುತ್ತದೆ ಹೊಳಲ್ಕೆರೆಯಲ್ಲಿ ಇರುವ 4000 ಸಂಘಗಳಲ್ಲಿ 50 ಸಂಘಗಳು ಪ್ರಗತಿ ಕಡಿಮೆಯಾಗಿದೆ ಇದನ್ನು ಸರಿಪಡಿಸಬೇಕಿದೆ ಎಂದು ವಿರೇಂದ್ರ ಹೆಗ್ಗಡೆ ಕರೆ ನೀಡಿದರು.

ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದ ಪುನಶ್ಚೇತನಗೊಂಡ ಕೆರೆಯ ಹಸ್ತಾಂತರ ಪ್ರಮಾಣ ಪತ್ರ ವಿತರಣೆಯನ್ನು ಮಾಡಿದ ಸಂಸದರಾದ ಗೋವಿಂದ ಎಮ್ ಕಾರಜೋಳ ಮಾತನಾಡಿ, ಹೊಳಲ್ಕೆರೆಯಲ್ಲಿ 4500 ಸ್ವಸಹಾಯ ಸಂಗಳಿದ್ದು ಇದರಲ್ಲಿ 40 ಸಾವಿರ ಜನ ಸದಸ್ಯರಿದ್ದಾರೆ. ರಾಜ್ಯದಲ್ಲಿ ಈ ರೀತಿಯಾದ ಸ್ವಸಹಾಯ ಸಂಘಗಳು ಹೆಚ್ಚಾಗಿದ್ದು, ಇದರ ಪ್ರಯೋಜನವನ್ನು ಹಲವಾರು ಜನತೆ ಪಡೆಯುತ್ತಿದ್ದಾರೆ. ಹೊಳಲ್ಕೆರೆಯಲ್ಲಿ ಸಂಘದವರು ಉಳಿತಾಯದ ಇದುವರೆವಿಗೆ 24.46 ಕೋಟಿ ಆಗಿದೆ, ಉತ್ತಮವಾದ ನಿರ್ವಹಣೆಯನ್ನು ಮಾಡಿದ ಸಂಘಗಳಿಗೆ ಬ್ಯಾಂಕ್‌ಗಳಿಂದ 204.16 ಕೋಟಿ ರೂ. ಸಾಲವನ್ನು ಕೊಡಿಸಲಾಗಿದೆ. ಉತ್ತಮವಾದ ಆರ್ಥಿಕ ವ್ಯವಹಾರವನ್ನು ನಡೆಸಿದ ಸಂಘಗಳಿಗೆ ಲಾಭಾಂಶವನ್ನು ವಿತರಣೆ ಮಾಡಲಗುತ್ತಿದ್ದು ಇದುವರೆವಿಗೂ ಎರಡು ಬಾರಿ ಲಾಭಾಂಶವನ್ನು ವಿತರಣೆ ಮಾಡಲಾಗಿದೆ ಈಗ ಮೂರನೇ ಭಾರಿ ಲಾಭಾಂಶವನ್ನು ವಿತರಣೆ ಮಾಡಲು ಸಂಘ ಮುಂದಾಗಿದ್ದು 2703 ಸಂಘಗಳಿಗೆ 11 ಕೋಟಿ ರೂ.ಗಳನ್ನು ವಿತರಣೆ ಮಾಡಲಾಗುತ್ತದೆ ಎಂದರು.

ಧರ್ಮಸ್ಥಳ ಪ್ರಪ್ರಥಮ ಬಾರಿಗೆ ವಿರೇಂಧ್ರರ ಹೆಗ್ಗಡೆಯವರು ಸಾಮೂಹಿಕ ವಿವಾಹವನ್ನು ಜಾರಿ ಮಾಡಿದರು ಇದರಿಂದ ರಾಜ್ಯದಲ್ಲಿ ಹಲವಾರು ಕುಟುಂಬಗಳಿಗೆ ನೆರವಾಗಿದ್ದಾರೆ. ಇವರು ಪ್ರಾರಂಭ ಮಾಡಿದ ಸಮಯದಲ್ಲಿ ರಾಜ್ಯದಲ್ಲಿ ಬರಗಾಲ ಇತ್ತು ರೈತರಿಗೆ ಕಷ್ಟದ ದಿನಗಳಾಗಿದ್ದವು ಇವರ ಕಾರ್ಯದಿಂದ ಅವರು ತಮ್ಮ ಮಗಳ ಮದುವೆಯನ್ನು ಮಾಡಲು ಅವಕಾಶವಾಯಿತು. ಇದು ಮುಂದಿನ ದಿನಮಾನದಲ್ಲಿ ರಾಜ್ಯದ ಎಲ್ಲಾ ಎಡೆಯಲ್ಲಿಯೂ ಸಹಾ ಜಾರಿಯಾಯಿತು. ಇಲ್ಲಿ ಜಾತಿ ಮತ ಪಂಥದ ಬೇಧ ಇಲ್ಲದೆ ಎಲ್ಲರಿಗೂ ಸಾಮೂಹಿಕವಾಗಿ ವಿವಾಹವನ್ನು ಮಾಡಲಾಯಿತು. ಇದರಿಂದ ಬಡತನದ ಭಾರವನ್ನು ಇಳಿಸುವ ಕಾರ್ಯವನ್ನು ಮಾಡಲಾಯಿತೆಂದು ಅವರ ಕಾರ್ಯವನ್ನು ಶ್ಲಾಘಿಸಿದರು.

ಸ್ವ-ಸಹಾಯ ಸಂಘಗಳಿಗೆ ಲಾಭಾಂಶ ವಿತರಣೆಯನ್ನು ಮಾಡಿದ ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾದ ಡಿ. ಸುಧಾಕರ್ ಮಾತನಾಡಿ, ಧರ್ಮಸ್ಥಳದ ಸಂಘಗಳ ಬಗ್ಗೆ ಹಲವಾರು ಜನತೆ ವಿವಿಧ ರೀತಿಯಲ್ಲಿ ಮಾತನಾಡುತ್ತಿದ್ದಾರೆ, ಆದರೆ ಇವರು ಯಾವುದೇ ರೀತಿಯ ಸ್ವಾರ್ಥ ಇಲ್ಲದೆ ಪ್ರಮಾಣಿಕವಾಗಿ ಜನರ ಸೇವೆಯನ್ನು ಮಾಡುವುದರ ಮೂಲಕ ಆವರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುತ್ತಿದ್ದಾರೆ. ನಮ್ಮಗೆ ಬಂದ ಲಾಭಾಂಶವನ್ನು ಸ್ವಸಹಾಯ ಸಂಘಗಳಿಗೆ ವಿತರಣೆಯನ್ನು ಮಾಡಲಾಗುತ್ತದೆ. ಸಮಾಜದ ಹಾಗೂ ನಿಮ್ಮಗಳ ಒಳಿತಿಗಾಗಿ ವಿರೇಂದ್ರ ಹೆಗ್ಗಡೆಯವರು ಹಲವಾರು ಕಾರ್ಯವನ್ನು ಜಾರಿ ಮಾಡುತ್ತಿದ್ದಾರೆ. ಗ್ರಾಮೀಣಾಭೀವೃದ್ದಿ ಸಂಘದ ಅಡಿಯಲ್ಲಿ ರಾಜ್ಯದ ಜನತೆಯನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡಲು ಮುಂದಾಗಿದ್ದಾರೆ ಎಂದು ಅವರ ಕಾರ್ಯವನ್ನು ಅಭಿನಂದಿಸಿದರು.

ನಿರಾಶ್ರಿತ ಕುಟುಂಬಕ್ಕೆ ಸೂರು ಕಲ್ಪಿಸುವ ನಿಟ್ಟನಲ್ಲಿವಾತ್ಸಲ್ಯಮನೆನಿರ್ಮಾಣವಾಗಿದ್ದು, ಇದರ ಹಸ್ತಾಂತರವನ್ನು ಫಲಾನುಭವಿಗಳಿಗೆ ಮಾಡಿದ ಮಾಜಿ ಸಚಿವರಾದ ಹೆಚ್. ಆಂಜನೇಯ ಮಾತನಾಡಿ, ಸರ್ಕಾರ ಮಾಡಬೇಕಾದ ಕೆಲಸವನ್ನು ಒಂದು ಧಾರ್ಮಿಕ ಸಂಸ್ಥೆ ಮಾಡುತ್ತಿದೆ ಎಂದರೆ ಇದು ನಿಜವಾಗಿಯೂ ಉತ್ತಮವಾದ ಕೆಲಸವಾಗಿದೆ. ಕಾಯಕದಲ್ಲಿ ನಂಬಿಕೆಯನ್ನು ಇರಿಸಿರುವ ವಿರೇಂದ್ರ ಹೆಗ್ಗಡೆಯವರು ಬೇರೆಯವರು ಸಹಾ ಕಾಯಕ ಮಾಡುವುದರ ಮೂಲಕ ಸ್ವಾವಲಂಬಿಗಳಾಗಲು ತಮ್ಮ ಸಂಘದ ಮೂಲಕ ಪ್ರೇರಣೆಯನ್ನು ನೀಡುತ್ತಿದ್ದಾರೆ. ಒಂದು ಕಾಲದಲ್ಲಿ ಧರ್ಮಸ್ಥಳ ಎಂದರೆ ಸತ್ಯ ನ್ಯಾಯಕ್ಕೆ ಹೆಸರಾಗಿತ್ತು ಆದರೆ ಇಂದಿನ ದಿನಮಾನದಲ್ಲಿ ರಾಜಕಾರಣಿಗಳು ಇದರ ದುರುಪಯೋಗವನ್ನು ಮಾಡಿಕೊಳ್ಳುತ್ತಿದ್ದಾರೆ ಎಂದರು.

ವಿದ್ಯಾರ್ಥಿಗಳಿಗೆ ಕ್ಷೇತ್ರದ ಮೂಲಕ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆಯನ್ನು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ನೇರವೇರಿಸಿದರು. ಈ ಸಂದರ್ಭದಲ್ಲಿ ಪುರಸಭೆಯ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವ ವಿದ್ಯಾಲಯದ ಸಂಚಾಲಕರಾದ ಸುಮಿತ್ರಕ್ಕ ಮಾತನಾಡಿದರು. ಗ್ರಾಮಾಭಿವೃದ್ಧಿ ಯೋಜನೆಯ ಸಮಗ್ರ ಕಾರ್ಯಕ್ರಮಗಳ ಕುರಿತು ಆಶಯ ಭಾಷಣವನ್ನು ಗ್ರಾಮಾಭಿವೃದ್ಧಿ ಯೋಜನೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಅನಿಲ್‌ಕುಮಾರ್‌ಎಸ್. ಎಸ್ ನೇರವೇರಿಸಿದರು. ಪುರಸಭೆಯ ಮಾಜಿ ಅಧ್ಯಕ್ಷರುಗಳಾದ ಆರ್.ಎ.ಅಶೋಕ್, ಬಿ.ಎಸ್.ರುದ್ರಪ್ಪ. ಮಾಜಿ ಉಪಾಧ್ಯಕ್ಷರಾದ ಕೆ.ಸಿ.ರಮೇಶ್, ಹಾಲಿ ಉಪಾಧ್ಯಕ್ಷರಾದ ಶ್ರೀಮತಿ ನಾಗರತ್ನ, ಸದಸ್ಯರಾದ ಸೈಯದ್ ಮನ್ಸೂರ್, ಮಲ್ಲಿಕಾರ್ಜನ್, ವಿಜಯ ಶ್ರೀಮತಿ ಮಮತ, ಮುರುಗೇಶ್, ಶ್ರೀಮತಿ ಶಬೀನ ಆಶ್ರಫ್ ವುಲ್ಲಾ, ಸೈಯದ್ ಸಜಿಲ್ ಶ್ರೀಪೂರ್ಣಿಮ ಶ್ರೀಮತಿ ಸುಧಾ, ಶ್ರೀಮತಿ ವಸಂತ ಮಂಜುನಾಥ್, ಬಸಬರಾಜು, ಮಜರವುಲ್ಲಾ ಜಿಲ್ಲಾ ಜನ ಜಾಗೃತಿ ವೇದಿಕೆಯ ಮಾಜಿ ಅಧ್ಯಕ್ಷರಾದ ಮಾರುತೇಶ್ ಹಾಲಿ ಅಧ್ಯಕ್ಷರಾದ ಓಂಕಾರಪ್ಪ ಭಾಗವಹಿಸಲಿದ್ದಾರೆ. ಧರ್ಮಸ್ಥಳ ಗ್ರಾಮೀಣ ಅಭೀವೃದ್ದಿ ಬಿ.ಸಿ.ಟ್ರಸ್ಟ್ ನ ನಿರ್ದೇಶಕರಾದ ದಿನೇಶ್ ಪೂಜಾರ್ ಸ್ವಾಗತಿಸಿದರು.

## ವಿದ್ಯಾರ್ಥಿಗಳು ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಬೇಕು

» ಹೊಸದುರ್ಗ

ವಿದ್ಯಾರ್ಥಿಗಳು ನಾಯಕತ್ವ ಗುಣವನ್ನು ಬೆಳೆಸಿಕೊಂಡರೆ ಜೀವನದಲ್ಲಿ ಬರುವ ಎಂಥ ಸಮಸ್ಯೆಗಳನ್ನು ಬೇಕಾದರೂ ಎದುರಿಸಬಹುದು ಎಂದು ಎಲ್ ಐ ಸಿ ಅಭಿವೃದ್ಧಿ ಅಧಿಕಾರಿಗಳಾದ ನವೀನ್ ಕುಮಾರ್ ಹೆಚ್ ಎಸ್ ಹೇಳಿದರು. ಪಟ್ಟಣದ ಶ್ರೀ ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರುವಿದ್ಯಾರ್ಥಿಗಳು ಕೇವಲ ಓದಿನಲ್ಲಿ ಮುಂದಿದ್ದರೆ ಸಾಲದು, ಎಲ್ಲಾ ಚಟುವಟಿಕೆಗಳಲ್ಲಿ ಭಾಗವಹಿಸದರೆ ಮಾತ್ರ ಉತ್ತಮ ವ್ಯಕ್ತಿತ್ವ ರೂಪುಗೊಳ್ಳಲು ಸಾಧ್ಯ ಎಂದರು.

ಕಾರ್ಯಕ್ರಮವನ್ನ ಉದ್ಘಾಟಿಸಿದ ಶಾಲಾ ಸಮಿತಿಯ ಸದಸ್ಯ ಎಸ್ ಓಂಕಾರಮೂರ್ತಿ ಮಾತನಾಡಿ ಹೆಣ್ಣು ಮಕ್ಕಳು ಉತ್ತಮ ವಿದ್ಯಾಭ್ಯಾಸ ಮಾಡಲು ಶ್ರೀ ತೋಟದ ರಾಮಯ್ಯ ಶಾಲೆ ಅತ್ಯುತ್ತಮ ಶಾಲೆಯಾಗಿದ್ದು, ಜೀವನದಲ್ಲಿ ಏನಾದರೂ ಸಾಧನೆ ಮಾಡಲು ಈ ಶಾಲೆ ಎಲ್ಲಾ ವೇದಿಕೆಯನ್ನು ಕಲ್ಪಿಸುತ್ತದೆ ಎಂದರುಶಾಲಾ ಸಮಿತಿಯ ಉಪಾಧ್ಯಕ್ಷ ಬಿ ಪಿ ಓಂಕಾರಪ್ಪ ಅಧ್ಯಕ್ಷತೆ ವಹಿಸಿದ್ದರು,



**ಪ್ರಮುಖ ಸುದ್ದಿ**

# ಅಂಬೇಡ್ಕರ್‌ಗೆ ಕಾಂಗ್ರೆಸ್ಸಿಂದಲೇ ಅವಮಾನ: ಕಾರಜೋಳ

» **ಚಿತ್ರದುರ್ಗ**



ಕಾಂಗ್ರೆಸ್ ಪಕ್ಷ ಡಾ.ಬಿ.ಆರ್. ಅಂಬೇಡ್ಕರ್‌ರವರಿಗೆ ಅವರು ಜೀವಿತಾ ಅವಧಿಯಲ್ಲಿಯೂ ಹಾಗೂ ಸತ್ತ ಮೇಲೂ ಸಹಾ ಅವಮಾನವನ್ನು ಮಾಡಿದ್ದಾರೆ ಇದನ್ನು ನನ್ನ ಮಾದಿಗ ಬಂಧುಗಳು ಅರಿಯಬೇಕಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದರಾದ ಗೋವಿಂದ ಕಾರಜೋಳ ತಿಳಿ ಹೇಳಿದರು.

ದೇಶದಲ್ಲಿ ಕೇಂದ್ರ ಗೃಹ ಸಚಿವರಾದ ಅವಿತಾ ಷಾ ರವರ ವಿರುದ್ದ ಕಾಂಗ್ರೆಸ್ ಪಕ್ಷ ಹಾಗೂ ದಲಿತ ಸಂಘಟನೆಗಳು ನಡೆಸುತ್ತಿರುವ ಪ್ರತಿಭಟನೆ ಹಾಗೂ ಧರಣಿಯ ವಿರುದ್ದ ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಇಡೀ ದೇಶದಲ್ಲಿನ ದಲಿತ ಬಂಧುಗಳಿಗೆ ಸತ್ಯ ಮತ್ತು ವಸ್ತುಸ್ಥಿತಿಯನ್ನು ಬಿಚ್ಚಿಡುವಂತಹ ಕೆಲಸ ಮಾಡುತ್ತೇನೆ. ಅಂಬೇಡ್ಕರ್‌ರವರು ದೇಶ ಸ್ವಾತಂತ್ರವಾದ ಸಂದರ್ಭದಲ್ಲಿ ಅವರು ನನಗೆ ಅರ್ಥ ಮಂತ್ರಿ ಸ್ಥಾನವನ್ನು ನೀಡುವಂತೆ ಅಂದಿನ ಪ್ರಧಾನ ಮಂತ್ರಿ ನೆಹರುರವರನ್ನು ಕೇಳಿದಾಗ ಅವರು ಇದನ್ನು ತಿರಸ್ಕರಿಸಿ ಅವರಿಗೆ ಕಾನೂನು ಮಂತ್ರಿಯನ್ನಾಗಿ ಮಾಡಿದರು. ಆದರೆ ಅಂಬೇಡ್ಕರ್ ಅವರು ನೆಹರು ರವರ ಕ್ಯಾಬಿನೆಟ್ ನಲ್ಲಿ ಬಹಳ ದಿವಸ ಇರಲಿಲ್ಲ.. ಅವಮಾನವನ್ನು ಸಹಿಸಿಕೊಳ್ಳಲಾರದೇ ರಾಜೀನಾಮೆ ಕೊಟ್ಟು ಹೊರ ಬಂದರು. 1952ರಲ್ಲಿ ನಡೆದ ಚುನಾವಣೆಯಲ್ಲಿ ಅವರು ಸ್ಪರ್ದೆ ಮಾಡಿದಾಗ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬಹುದಾಗಿತ್ತು ಆದರೆ ಅದನ್ನು ಬಿಟ್ಟು ಅವರನ್ನು ಚುನಾವಣೆಯಲ್ಲಿ ಸೋಲಿಸಿದ ಕೀರ್ತಿ ಕಾಂಗ್ರೆಸ್‌ಗೆ ಸಲುತ್ತದೆ ಇದನ್ನು ನಮ್ಮ ದಲಿತ ಯುವಕರು ಅರ್ಥಮಾಡಿಕೊಳ್ಳಬೇಕು.ಎಂದರು.

ದೇಶದಲ್ಲಿನ ದಲಿತ ಸಮುದಾಯ ಕಾಂಗ್ರೆಸ್‌ನ ಗುಲಾಮಿತನದಿಂದ ಹೊರ ಬರುವವರೆಗೂ ದಲಿತರು ಸ್ವಾತಂತ್ರ್ಯದಿಂದ ಹೊರ ಬರಲು ಸಾಧ್ಯವಿಲ್ಲ. ಅಂಬೇಡ್ಕರ್‌ರವರು ಜೀವಿತ ಕಾಲದಲ್ಲಿ ಕಾಂಗ್ರೆಸ್ ಪಕ್ಷ ಮಾಡಿದ ಅವಮಾನವನ್ನು ದಲಿತ ಸಮುದಾಯ ಎಂದಿಗೂ ಸಹಾ ಮರೆಯಲು ಸಾಧ್ಯವಿಲ್ಲ, ಇದರ ಬಗ್ಗೆ ಜನ ಜಾಗೃತಿಯನ್ನು ಮೂಡಿಸುವ ಕಾರ್ಯವನ್ನು ಮುಂದಿನ ದಿನಮಾನದಲ್ಲಿ ಮಾಡಲಾಗುವುದು. ಇದರ ಬಗ್ಗೆ ಬಿಜೆಪಿ ಧ್ವನಿಯನ್ನು ಎತ್ತಲಿದೆ. ಅಂಬೇಡ್ಕರ್ ರವರನ್ನು ಕಾಂಗ್ರೆಸ್ ನಡೆಸಿಕೊಂಡ ರೀತಿ ಸರಿಯಿಲ್ಲ, ಇದನ್ನು ತಿಳಿಸುವ ಕಾರ್ಯವಾಗಬೇಕಿದೆ. ಅಂಬೇಡ್ಕರ್ ರವರಿಗೆ ಭಾರತ ರತ್ನ ನೀಡಲಿಲ್ಲ ಆದರೆ ನೆಹರು ರವರು ಪ್ರಧಾನ ಮಂತ್ರಿಯಾಗಿದ್ದಾಗ ಅವರಿಗೆ ಅವರೇ ಭಾರತರತ್ನ ಪ್ರಶಸ್ತಿಯನ್ನು ಘೋಷಿಸಿಕೊಂಡಿದ್ದಾರೆ ಎಂದರು.

ಅಂಬೇಡ್ಕರ್ ರವರ ನಿಧನ ಸಮಯದಲ್ಲಿ ಅವರ ದೇಹದ ಅಂತ್ಯಕ್ರಿಯೇ ನಡೆಸಲು ದೆಹಲಿಯಲ್ಲಿ ಅಂದಿನ ಕಾಂಗ್ರೆಸ್ ಸರ್ಕಾರ ಅವಕಾಶವನ್ನು ನೀಡಲಿಲ್ಲ ಆದರೆ ಕಾಂಗ್ರೆಸ್ ಸರ್ಕಾರ ನೆಹರು ಮನೆತನದವರಿಗೆ ಅಂತ್ಯ ಸಂಸ್ಕಾರ ಮಾಡಲು ನೂರಾರು ಎಕರೆ ಜಾಗವನ್ನು ನೀಡಿದ್ದಾರೆ ಇದನ್ನು ಅವರ ಅಪ್ಪನ ಮನೆಯಿಂದ ನೀಡಿದ್ದಾರೆ ಎಂದು ಸಂಸದರು ಖಾರವಾಗಿ ಪ್ರಶ್ನಿಸಿ, ಅಂಬೇಡ್ಕರ್ ಸತ್ತಾಗ ಉಳಲಿಕ್ಕೆ ಜಾಗ ಕೊಡದಂತಹ ಕಾಂಗ್ರೆಸ್ ನವರನ್ನು ಕೆಲವು ತಿಳುವಳಿಕೆ ಇಲ್ಲದ ಯುವಕರು ಅವರನ್ನು ಬೆಂಬಲಿಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಜನರಿಗೆ ಶಿಕ್ಷಣವನ್ನು ನೀಡದೆ ದಲಿತರನ್ನು ಕತ್ತಲಿನಲ್ಲಿ ಇಡಲಾಗಿದೆ ಇವರಿಗೆ ಶಿಕ್ಷಣವನ್ನು ನೀಡಿದೆ ನಮಗೆ ಮತಗಳು ಬರುವುದಿಲ್ಲ ಎಂದು ಮನಗಂಡು ಅವರಿಗೆ ಶಿಕ್ಷಣವನ್ನು ನೀಡದೇ ಬರೀ ಆಹಾರ, ಆರೋಗ್ಯ ಮನೆಯ ಬಗ್ಗೆ ಮಾತ್ರವೇ ಮಾತನಾಡಿದೆ ದಲಿತರಿಗೆ ಶಿಕ್ಷಣವನ್ನು ಕೊಡಿಸುವ ಮಾತನ್ನು ಎಲ್ಲಿಯೂ ಸಹಾ ಹೇಳಿಲ್ಲ ಎಂದು ಟೀಕಿಸಿದರು.

ಕಳೆದ ಸುಮಾರು ಒಂದು ವಾರದಿಂದ ಕಾಂಗ್ರೆಸ್ ನವರು ದೇಶದ ಉದ್ದಗಲಕ್ಕೂ ಸುಳ್ಳು ಆಪಾದನೆಗಳನ್ನು ಮಾಡಿ ಅಮಿತ್ ಶಾ ರವರ ವಿರುದ್ಧ ದಲಿತರನ್ನು ಎತ್ತಿ ಕಟ್ಟುವಂತಹ ಹೊನ್ನಾರವನ್ನು ಮಾಡುತ್ತಿದ್ದಾರೆ ಅದನ್ನು ನಾನು ಖಂಡಿಸುತ್ತೇನೆ.ನೆಹರು ಮನೆತನ ಮತ್ತು ಕಾಂಗ್ರೆಸ್ಸಿನ ಗುಲಾಮಿ ಮನಸ್ಥಿತಿಯಿಂದ ನಾವು ಹೊರಬರಬೇಕು.. ಹೊರಗೆ ಬರದೇ ಇದ್ದರೆ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ರವರು ಬಯಸಿದಂತಹ ಸ್ವಾತಂತ್ರ್ಯ ದಲಿತರಿಗೆ ಈ ದೇಶದಲ್ಲಿ ಸಿಗಲಿಕ್ಕೆ ಸಾಧ್ಯಯಿಲ್ಲ.. ಈ ರಾಜ್ಯದಲ್ಲೂ ಸಿಗಲಿಕ್ಕೆ ಸಾಧ್ಯವಿಲ್ಲ.ಅಂಬೇಡ್ಕರ್ ರವರು ದೇಶದ ಉದ್ದಗಲಕ್ಕೂ ಸಂಚರಿಸಿ ದೇಶಕ್ಕೆ ಬೇಕಾದಂತಹ ಕೇವಲ ಮನುಷ್ಯರಿಗೆ ಅಷ್ಟೇ ಅಲ್ಲದೆ ಪಶು ಪ್ರಾಣಿ ಪಕ್ಷಿಗಳಿಗೆ ರಕ್ಷಣೆ ನೀಡುವಂತಹ ಯಾವ ರಾಷ್ಟ್ರದಲ್ಲೂ ಇಲ್ಲದಂತಹ ಒಂದು ವಿಶಿಷ್ಟವಾದ ಸಂವಿಧಾನವನ್ನುರಚನೆಮಾಡಿಕೊಟ್ಟಿದ್ದಾರೆ. ಅವರನ್ನು ದೇಶದ ಮೊದಲ ಪ್ರಧಾನ ಮಂತ್ರಿ ಪಂಡಿತ್ ಜವಹರಲಾಲ್ ನೆಹರು ರವರು ನಡೆಸಿಕೊಂಡಂತಹಹ ರೀತಿ ಇವತ್ತು ನಮ್ಮ ಜನರಿಗೆ ಅರ್ಥ ಆಗಬೇಕು ಎಂದರು.

ಕಾಂಗ್ರೆಸ್ ಪಕ್ಷ ಬರೀ ಅಂಬೇಡ್ಕರ್ ರವರಿಗೆ ಮಾತ್ರವಲ್ಲ ಬಾಬಾ ಜಗಜೀವನ್ ರವರು ಈ ದೇಶದ ಪ್ರಧಾನ ಮಂತ್ರಿ ಆಗಬೇಕಾಗಿತ್ತು.. ಆದರೆ ಕಾಂಗ್ರೆಸ್ ಪಕ್ಷದ ಕುತಂತ್ರದಿಂದ ಇಂದಿರಾಗಾಂಧಿ ಕುತಂತ್ರದಿಂದ ಅವರು ಸೋಲನ್ನು ಅನುಭವಿಸಬೇಕಾಯಿತು. ಕರ್ನಾಟಕದಲ್ಲಿ ದಿವಂಗತ ದೇವರಾಜ ಅರಸು ರವರು ಮುಖ್ಯಮಂತ್ರಿ ಆಗಿ ಸಾಮಾಜಿಕ ಕ್ರಾಂತಿಯನ್ನೇ ಮಾಡಿದವರು ಅಂಥವರನ್ನು ಸಹ ಕಾಂಗ್ರೆಸ್ಸಿನಿಂದ ಉಚ್ಚಾಟನೆ ಮಾಡಿದರು.ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕೊಟ್ಟಂತಹ ವಿ.ಪಿ ಸಿಂಗ್ ರವರನ್ನು ಕಾಂಗ್ರೆಸ್ನವರು ಉಚ್ಚಾಟನೆ ಮಾಡಿದರು. ಕರ್ನಾಟಕದಲ್ಲಿ ಕಾಂಗ್ರೆಸ್‌ಗೆ ನೆಲೆಯನ್ನು ತಂದುಕೊಟ್ಟವರು ವೀರೇಂದ್ರ ಪಾಟೀಲ್ ರವರು ಅನಾರೋಗ್ಯದಿಂದ ಆಸ್ಪತ್ರೆಯಲ್ಲಿದ್ದ ಸಂದರ್ಭದಲ್ಲಿ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದ್ದು ಕಾಂಗ್ರೆಸ್ ನವರು ಎಂದು ಕಾಂಗ್ರೆಸ್ ಪಕ್ಷದ ವಿರುದ್ದ ಕಿಡಿ ಕಾರಿದರು.

ನಮ್ಮ ಸರ್ಕಾರ ಇದ್ದಾಗ ಒಳ ಮೀಸಲಾತಿಗೆ ಶಿಫಾರಸ್ಸು ಮಾಡಿದ್ದೆವು.. ಈಗ ಸುಪ್ರೀಂ ಕೋರ್ಟ್ ಸಹ ಒಪ್ಪಿ ಸುಪ್ರೀಂ ಕೋರ್ಟನಿಂದ ಆದೇಶ ಆಗಿದೆ.. ಒಳ ಮೀಸಲಾತಿ ಆಗಬೇಕೆಂದು.ಒಳ ಮೀಸಲಾತಿಗೆ ವಿರೋಧ ಮಾಡುತ್ತಿರುವುದು ಕಾಂಗ್ರೆಸ್‌ನವರು.. ಏಕೆ ವಿರೋಧ ಮಾಡುತ್ತಿದ್ದಾರೆ ಅಂದರೆ ಇವರ ಮಕ್ಕಳು ಸೌಲಭ್ಯವನ್ನು ಪಡೆದುಕೊಂಡು ಮುಂದೆ ಬಂದರೆ ಮುಂದೆ ಕಾಂಗ್ರೆಸ್ಸಿಗೆ ವೋಟ್ ಬ್ಯಾಂಕ್ ಇರುವುದಿಲ್ಲ ಎಂಬ ಭಯದಿಂದ ಜಾರಿ ಮಾಡುತ್ತಿಲ್ಲ.ಅವರು ಪ್ರಣಾಳಿಕೆಯಲ್ಲಿ ಹೇಳಿದ್ದರು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಮೊದಲ ಕ್ಯಾಬಿನೆಟ್ ನಲ್ಲಿ ಜಾರಿ ಮಾಡುತ್ತೇವೆ ಅಂತ ಹೇಳಿದ್ದರು.. ಆದರೆ ಜಾರಿ ಮಾಡಲಿಲ್ಲ.. ಇದಕ್ಕೆ ಕಾರಣ ದಲಿತ ವಿರೋಧಿ ನೀತಿ ಎಂದರು.

## ಫಾಸ್ಟ್ ನ್ಯೂಸ್

### ಗೋಪನಹಳ್ಳಿ ಉಚಿತ ಆರೋಗ್ಯ ತಪಾಸಣೆ



» **ಚಳ್ಳಕೆರೆ**

ವೈದ್ಯರು ಸಾರ್ವಜನಿಕರನ್ನು ಆರೋಗ್ಯವಂತರನ್ನಾಗಿ ಮಾಡುವ ಮೂಲಕ ಸಮಾಜಕ್ಕೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆಂದು ಗೋಪನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಮ್ಮ ತಿಳಿಸಿದರು. ಅವರು, ಗೋಪನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ, ಚಿತ್ರದುರ್ಗ ಬಸವೇಶ್ವರ ಮೆಡಿಕಲ್ ಕಾಲೇಜು, ಗ್ರಾಮ ಪಂಚಾಯಿತಿ ಆಡಳಿತದ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇಂತಹ ಶಿಬಿರಗಳು ಹೆಚ್ಚು, ಹೆಚ್ಚು ಗ್ರಾಮೀಣ ಭಾಗಗಳಲ್ಲಿ ನಡೆಯುವ ಬಗ್ಗೆ ಆರೋಗ್ಯ ಇಲಾಖೆ ಜಾಗ್ರತೆ ವಹಿಸಬೇಕು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ.ಬಿಂದುಶ್ರೀ, ಆರೋಗ್ಯ ಇಲಾಖೆ ಜನರ ಆರೋಗ್ಯದ ಬಗ್ಗೆ ಪ್ರತಿನಿತ್ಯವೂ ವಿಶೇಷ ಗಮನತೋರುವ ಮೂಲಕ ಅವರನ್ನು ರೋಗದಿಂದ ಮುಕ್ತರಾಗುವ ಅವಕಾಶವನ್ನು ಕಲ್ಪಿಸಲಾಗುತ್ತಿದೆ. ಇಂದಿನ ಈ ಆರೋಗ್ಯ ಶಿಬಿರದಲ್ಲಿ ತಪಾಸಣೆಗೆ ಒಳಗಾದ ಯಾವುದೇ ವ್ಯಕ್ತಿಗೆ ಭಯಾನಕ ಕಾಯಿಲೆ ಇದ್ದಲ್ಲಿ ಚಿತ್ರದುರ್ಗ ಮೆಡಿಕಲ್ ಕಾಲೇಜು, ಆಸ್ಪತ್ರೆ ಸಕರಾತ್ಮಕವಾಗಿ ಸ್ಪಂದಿಸಲಿದೆ. ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಇಲ್ಲಿನ ಸಾರ್ವಜನಿಕರು ಹಾಗೂ ಗ್ರಾಮ ಪಂಚಾಯಿತಿ ಆಡಳಿತ ಸಹಕಾರ ನೀಡುತ್ತಿದ್ದು, ಆರೋಗ್ಯ ಇಲಾಖೆ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಆಸ್ಪತ್ರೆ ಸಿಬ್ಬಂದಿಯಾದ ತಿಪ್ಪೇರುದ್ರಸ್ವಾಮಿ, ಬಾಬುರಾಜೇಂದ್ರ, ಜಿ.ಟಿ.ಮಮತ, ರವೀಂದ್ರ, ಹೇಮಾ, ರಂಜಿತ, ಲಕ್ಷ್ಮಿದೇವಿ, ಹನುಮಂತ, ಕರಿಯಪ್ಪ, ವೆಂಕಟೇಶ್, ಆಶಾ ಕಾರ್ಯಕರ್ತೆಯರಾದ ಗೌರಮ್ಮ, ವಸಂತಮ್ಮ, ಭಾರತಮ್ಮ, ಅನುಸೂಯಮ್ಮ, ತಾಲ್ಲೂಕು ನೋಡಲ್ ಲ್ಯಾಬ್ ಅಧಿಕಾರಿ ಎಚ್. ತಿಪ್ಪೇಸ್ವಾಮಿ, ಪಿಡಿಒ ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

### ಸಂವಿಧಾನದಡಿಯಲ್ಲಿ ಜೀವಿಸುತ್ತಿರುವ ನಮಗೆ ಪ್ರಜಾಕಲ್ಯಾಣ ಮುಖ್ಯ



» **ಹೊಸದುರ್ಗ**

ಪ್ರಜಾಕಲ್ಯಾಣವೇ ಪ್ರಜಾಪ್ರಭುತ್ವವಾಗಿದೆ. ನಾವಿಂದು ಸಂವಿಧಾನದ ಅಡಿಯಲ್ಲಿ ಜೀವನ ಮಾಡುತ್ತಿದ್ದೇವೆ. ಅದೇ ಪ್ರಜಾಕಲ್ಯಾಣ. ಇಂದಿನ ಮಕ್ಕಳು ಹುಟ್ಟಿನಿಂದಲೇ ದೇಶದ ಪ್ರಜೆಗಳು ಅವರೇ ಮುಂದಿನ ರಾಷ್ಟದ ಭವಿಷ್ಯಗಳು ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಅಭಿಪ್ರಾಯಪಟ್ಟರು. ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ, ಶಿಕ್ಷಣ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಜೂನಿಯರ್ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಆಯೋಜಿಸಿದ್ದ 'ಬಾಲ್ಯ ವಿವಾಹ ನಿಷೇಧ ಹಾಗೂ ವಿಶ್ವ ಮಾನವ ಹಕ್ಕುಗಳ ದಿನದ ಅಂಗವಾಗಿ ಕಾನೂನು ಅರಿವು ನೆರವು' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನದಲ್ಲಿ ಮಾತೃತ್ವವಿದೆ. ಅದನ್ನು ಅಪಾರವಾಗಿ ಗೌರವಿಸಬೇಕು. ಸಂವಿಧಾನದ ಪ್ರಕಾರ ಪ್ರತಿಯೊಬ್ಬರು ಇಲ್ಲಿ ಸೇವಕರು. ಎಲ್ಲರ ಪ್ರಮುಖ ಉದ್ದೇಶ ಸೇವೆಯೇ ಆಗಿದೆ. ಸಾರ್ವಜನಿಕರ ಸೇವಕರಿದ್ದಂತೆ. ನಾವೆಲ್ಲಾ ಸೇವೆ ಮಾಡಲು ಹುಟ್ಟಿದ್ದೇವೆ ಎಂಬುದರ ಅರಿವು ಪ್ರತಿಯೊಬ್ಬರಿಗೂ ಇರಬೇಕು. ತ್ಯಾಗ ಮತ್ತು ಸೇವೆಯೇ ಪ್ರಮುಖ ಅಂಶವಾಗಿವೆ. ಸಾರ್ವಭೌಮತ್ವ ಪ್ರಜೆಗಳಲ್ಲಿಯೆ ಇರಬೇಕು. ನಮ್ಮ ಸ್ವಭಾವ ಹಾಗೂ ಆಲೋಚನೆಗಳಲ್ಲಿ ಬದಲಾವಣೆ ಆಗಬೇಕು. ಆಗ ಎಲ್ಲರೂ ಸೇವಕರಾಗುತ್ತಾರೆ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಹೇಳಿದರು. ಈ ವೇಳೆ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಪ್ರಸನ್ನಕುಮಾರ್ ಸಿ, ವಕೀಲರ ಸಂಘದ ಅಧ್ಯಕ್ಷ ಹೆಚ್.ಬಿ. ರವಿಕುಮಾರ್, ಉಪಾಧ್ಯಕ್ಷ ಜಗದೀಶ್ ನಾಯಕ್, ಕಾರ್ಯದರ್ಶಿ ಇ.ಟಿ. ರಮೇಶ್, ಉಪಪ್ರಾಂಶುಪಾಲ ನಾಗೇಂದ್ರಪ್ಪ ಹೆಚ್ ಸೇರಿದಂತೆ ತಾಲ್ಲೂಕು ಕಾನೂನು ಸೇವಾ ಸಮಿತಿ ಸದಸ್ಯರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳಿದ್ದರು.



# ಮಾರ್ಗದರ್ಶಕರು.......

ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಮೌಲ್ಯಗಳ ಸಾಗಾಣಿಕೆ ಮಾಡುವ ನಿಜ ಮನುಷ್ಯರನ್ನು ಗಮನದಲ್ಲಿಟ್ಟುಕೊಂಡು ಈ ಪದ ಪ್ರಯೋಗ ಮಾಡಲಾಗುತ್ತಿದೆ.......

ನಡೆ ನುಡಿಯಲ್ಲಿ ಹೆಚ್ಚಿನ ವ್ಯತ್ಯಾಸವಿಲ್ಲದ, ವಿಶಾಲ ಮನೋಭಾವದ, ತುಂಬು ಹೃದಯದ ಪ್ರಬುದ್ಧ ವ್ಯಕ್ತಿತ್ವದ ಜನರೇ ಈ ಮಾರ್ಗದರ್ಶಕರು....

ಎಲ್ಲಾ ಕಾಲದಲ್ಲೂ ಒಂದಷ್ಟು ಜನರು ಈ ಕೆಲಸವನ್ನು ಅಥವಾ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕತೆಯಿಂದ ನಿರ್ವಂಚನೆಯಿಂದ ನಿರ್ವಹಿಸಿದ್ದಾರೆ. ಅದಕ್ಕೆ ಸಾಕಷ್ಟು ಉದಾಹರಣೆಗಳು ಇವೆ.....

ಆದರೆ ಈಗಿನ ಸಂದರ್ಭದಲ್ಲಿ....


ಮಕ್ಕಳು, ಯುವಕರು, ಗ್ರಾಮೀಣ ಪ್ರದೇಶದ ಜನರು, ಅನಕ್ಷರಸ್ಥ ಮಹಿಳೆಯರು ಇವರುಗಳಿಗೆ

ಮಾರ್ಗದರ್ಶಕರ ಕೊರತೆ ತುಂಬಾ ಕಾಡುತ್ತಿದೆ.......

ಅದರಲ್ಲೂ ಮುಖ್ಯವಾಗಿ 15 ರಿಂದ 35 ವರ್ಷ ವಯಸ್ಸಿನ ಯುವ ಜನಾಂಗ ಈ ವಿಷಯದಲ್ಲಿ ಉತ್ತಮ ಗುಣಮಟ್ಟದ ಕೊರತೆ ಎದುರಿಸುತ್ತಿದೆ.

ಶಿಕ್ಷಣ – ಉದ್ಯೋಗ – ಆರೋಗ್ಯ – ಮದುವೆ – ಕುಟುಂಬದ ನಿರ್ವಹಣೆ – ಸಾಮಾಜಿಕ ಜವಾಬ್ದಾರಿ – ಮಾನವೀಯ ಮೌಲ್ಯಗಳ ನಿರ್ವಹಣೆ – ವೈಯಕ್ತಿಕ ಮಾನಸಿಕ ಒತ್ತಡ ಇವುಗಳಲ್ಲಿ ಸ್ಪಷ್ಟವಾದ ತೀರ್ಮಾನ ಕೈಗೊಳ್ಳುವಲ್ಲಿ ಯುವ ಜನಾಂಗ ವಿಫಲವಾಗುತ್ತಿದೆ.

ಕೆಲವು ಕಾರ್ಪೊರೇಟ್ ಸಂಸ್ಥೆಗಳು ವ್ಯಕ್ತಿತ್ವ ವಿಕಸನದ ಕೆಲವು ಸಲಹಾ ಕೇಂದ್ರಗಳನ್ನು ಅಲ್ಲಲ್ಲಿ ಸ್ಥಾಪಿಸಿವೆ. ಆದರೆ ಅವುಗಳು ಸಂಪೂರ್ಣ ವಾಣಿಜ್ಯೀಕರಣವಾಗಿವೆ ಮತ್ತು ಅದರಲ್ಲಿ ಭಾರತೀಯ ಸಂಸ್ಕೃತಿಯ – ಈ ಮಣ್ಣಿನ ಮೂಲದ್ರವ್ಯವೇ ಇರುವುದಿಲ್ಲ.



ಎ□□□□□□ಲ್ ಸಿ , ಪಿಯುಸಿ ನಂತರದ ಶಿಕ್ಷಣದ ಆಯ್ಕೆಗಳ ಬಗ್ಗೆ ಪೋಷಕರಲ್ಲಿ ಆತಂಕ ಮತ್ತು ಗೊಂದಲ ಉಂಟಾಗುತ್ತದೆ. ಮಗ ಅಥವಾ ಮಗಳು ತೆಗೆದುಕೊಳ್ಳುವ ಅಂಕಗಳು, ಆ ಮಕ್ಕಳ ಆಸಕ್ತಿ, ಅದಕ್ಕಿರುವ ಅವಕಾಶ ಯಾವುದನ್ನೂ ಸರಿಯಾಗಿ ನಿರ್ಧರಿಸಲು ಸಾಧ್ಯವಾಗುತ್ತಿಲ್ಲ. ಒಂದು ವೇಳೆ ಪರೀಕ್ಷೆಗಳಲ್ಲಿ ಅನುತ್ತೀರ್ಣವಾದರೆ ಆಗ ಇರುವ ಅವಕಾಶದ ಬಗ್ಗೆಯೂ ಮಾಹಿತಿ ಇರುವುದಿಲ್ಲ. ಆ ಮಕ್ಕಳ ಬದುಕೇ ಮುಗಿದು ಹೋದಂತೆ ಆಡುತ್ತಾರೆ.

ಆರೋಗ್ಯದ ಬಗ್ಗೆ ಆಗುವ ಬದಲಾವಣೆಗಳು – ಅದರ ಚಿಕಿತ್ಸಾ ವಿಧಾನಗಳ ಬಗ್ಗೆಯೂ ಸರಿಯಾದ ಗುಣಮಟ್ಟದ ಮಾರ್ಗದರ್ಶನ ದೊರಕದೆ ಮಾಧ್ಯಮಗಳ ಜಾಹೀರಾತುಗಳಿಗೆ ಮರುಳಾಗುವುದನ್ನು ಗಮನಿಸಬಹುದು.

ಉದ್ಯೋಗದ ಆಯ್ಕೆ, ತದನಂತರ ಗಂಡ ಅಥವಾ ಹೆಂಡತಿಯ ಆಯ್ಕೆ, ಆ ಸಂದರ್ಭದಲ್ಲಿ ಪೋಷಕರ ಜವಾಬ್ದಾರಿ, ಸಾಮಾನ್ಯ ಕೌಟುಂಬಿಕ ಕಲಹಗಳ ನಿರ್ವಹಣೆ ಈ ವಿಷಯಗಳಲ್ಲಿ ತುಂಬಾ ಎಡುವುತ್ತಿದ್ದಾರೆ. ಪೋಲೀಸು, ಕೋರ್ಟು, ಕಚೇರಿ ಎಂದು ಅಲೆದಾಡುತ್ತಾ ಸಣ್ಣ ವಿಷಯಗಳಿಗೂ ಒತ್ತಡವನ್ನು ತಮ್ಮ ಮೇಲೆ ಎಳೆದುಕೊಳ್ಳುತ್ತಿದ್ದಾರೆ.

ವ್ಯಾಪಾರ, ವ್ಯವಹಾರ, ಸಂಗೀತ, ಸಾಹಿತ್ಯ, ಕಲೆ, ಕ್ರೀಡೆ, ವಿಜ್ಞಾನ ಮುಂತಾದ ಕ್ಷೇತ್ರಗಳಲ್ಲಿ ಆಸಕ್ತಿ ಇರುವವರು ಬೆರಳೆಣಿಕೆಯಷ್ಟು ಇರುವ ಯಶಸ್ವಿ ಜನರನ್ನು ಅನುಕರಣೆ ಮಾಡಲು ಹೋಗಿ ಸರಿಯಾದ ಮಾರ್ಗದರ್ಶವಿಲ್ಲದೆ ತುಂಬಾ ತೊಂದರೆ ಅನುಭವಿಸುತ್ತಿದ್ದಾರೆ.

ಜಾಗತೀಕರಣದ ಈ ಸಂದರ್ಭದಲ್ಲಿ ಬದಲಾದ ವ್ಯವಸ್ಥೆಯನ್ನು ಗುರುತಿಸಲು ಅವರಿಗೆ ಸಾಧ್ಯವಾಗುತ್ತಿಲ್ಲ.


ಮೊದಲಿದ್ದ ಹಿತೈಷಿಗಳ ಮಾರ್ಗದರ್ಶನಕ್ಕೆ ಪರ್ಯಾಯವಾಗಿ ಈಗ ಇಂಟರ್ ನೆಟ್ ನಲ್ಲಿ ಎಲ್ಲಾ ಮಾಹಿತಿಗಳೂ ಸಿಗುತ್ತಿವೆ. ಇದು ಮೇಲ್ನೋಟಕ್ಕೆ ಉತ್ತಮ ಬೆಳವಣಿಗೆ. ಆದರೆ ನಿಜವಾದ ಅಂತಃಸತ್ವ ಇಲ್ಲದ ಯಾಂತ್ರಿಕ ಮತ್ತು ನಿರ್ಜೀವ ಸ್ಥಿತಿಯತ್ತ ಯುವ ಜನಾಂಗವನ್ನು ಕೊಂಡೊಯ್ಯುತ್ತಿದೆ. ಮಾಹಿತಿಯೇ ಜ್ಞಾನ ಎಂಬ ತಪ್ಪು ಅಭಿಪ್ರಾಯ ಸಾಕಷ್ಟು ಜನರಲ್ಲಿ ಮನೆ ಮಾಡಿದೆ. ಇದು ವ್ಯಕ್ತಿಯ ಕ್ರಿಯಾತ್ಮಕತೆಯನ್ನು ಕೊಲ್ಲುತ್ತಿದೆ. ಹರಿಯುವ ನೀರಿನಂತೆ ಜ್ಞಾನವು ಸಹ ಸದಾ ಚಲಿಸುತ್ತಲೇ ಇರುತ್ತದೆ. ಅದು ನಿಂತ ನೀರಾದಾಗ ಕೊಳೆಯಲಾರಂಭಿಸುತ್ತದೆ. ನಮ್ಮೊಳಗಿನ ಅಜ್ಞಾನವನ್ನು ಹುಡುಕಿ ಹೋಗಲಾಡಿಸುವುದು ಸಹ ಜ್ಞಾನದ ಒಂದು ಭಾಗ. ಅದರ ಆಳಕ್ಕೆ ಇಳಿಯುವ ತಾಳ್ಮೆ, ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ ವಾತಾವರಣ ಇಲ್ಲವಾಗಿದೆ.

ಇದು ಅಪಾಯಕಾರಿ ಎನ್ನುವುದಕ್ಕಿಂತಲೂ ಇದೊಂದು ಸವಾಲು ಎಂದು ಪರಿಗಣಿಸಿ ಇದನ್ನು ಸಕಾರಾತ್ಮಕವಾಗಿ ಸ್ವೀಕರಿಸುವ ಮತ್ತು ಆ ಮಕ್ಕಳಿಗೆ ಪ್ರಬುದ್ಧತೆಯ ಗುಣಮಟ್ಟದ ಮಾರ್ಗದರ್ಶನ ಸಿಗುವಂತೆ ಮಾಡುವ ಜವಾಬ್ದಾರಿ ಹಿರಿಯರು ತೆಗೆದುಕೊಳ್ಳಬೇಕಾಗಿದೆ. ಆಗ ಮುಂದಿನ ಪೀಳಿಗೆ ಉತ್ತಮ ಗುಣಮಟ್ಟದ ಜೀವನ ಶೈಲಿಯನ್ನು ರೂಪಿಸಿಕೊಳ್ಳಲು ಸಹಾಯವಾಗುತ್ತದೆ.

ಆ ದಿನಗಳ ನಿರೀಕ್ಷೆಯಲ್ಲಿ............

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ಪ್ರಮುಖ ಸುದ್ದಿ

# ಬಗರ್ ಹುಕುಂ ಸಮಿತಿಯಲ್ಲಿ 44 ಅರ್ಜಿ ವಿಲೇವಾರಿ ಮಾಡಿದ ಶಾಸಕರು

» **ಹೊಸದುರ್ಗ**

ಗೋಮಾಳ, ಡೀಮ್ಡ್ ಫಾರೆಸ್ಟ್ ಗಳಲ್ಲಿ ಸಾಗುವಳಿ ಮಾಡುತ್ತಿರುವವರ ಅರ್ಜಿಗಳನ್ನು ಕೂಲಂಕುಶವಾಗಿ ಪರಿಶೀಲಿಸಿ 44 ಅರ್ಜಿಗಳನ್ನು ವಿಲೇವಾರಿ ಮಾಡಲಾಯಿತು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಶಾಸಕ ಬಿ.ಜಿ. ಗೋವಿಂದಪ್ಪ ಅವರ ಅಧ್ಯಕ್ಷತೆಯಲ್ಲಿ ಬಗರ್ ಹುಕುಂ ಅಕ್ರಮ ಸಕ್ರಮ ಸಭೆ ನಡೆಯಿತು. ಸಭೆಯಲ್ಲಿ ಪರಿಶೀಲನೆಗೊಂಡಿರುವ 44 ಅಜಿ9 ವಿತರಿಸುವ ಬಗ್ಗೆ ನಿರ್ಣಯ ಕೈಗೊಳ್ಳಲಾಯಿತು.

ಬಗರ್ ಹುಕುಂ ಅಕ್ರಮ ಸಕ್ರಮದಡಿ ಎಲ್ಲಾ ಅರ್ಜಿಗಳನ್ನು ಪರಿಶೀಲನೆ ಮಾಡಲಾಗುವುದು. ಈ ಬಗ್ಗೆ ಯಾವ ರೈತರೂ ಆತಂಕ ಪಡುವಂತಿಲ್ಲ. ಎಲ್ಲಾ ಸರ್ವೆ ನಂಬರ್, ಜಮೀನಿನ ಮಾಹಿತಿಯನ್ನು ಜಿಪಿಎಸ್ ಮೂಲಕ ಆನ್ ಲೈನ್



ನಲ್ಲಿಯೇ ಎಲ್ಲಾ ನೋಂದಣಿ ಕಾರ್ಯ ನಡೆಯುತ್ತದೆ. ರೈತರು ನೋಂದಣಿಯಾಗಿ ಪಹಣಿ ಸಮೇತ ತಾಲ್ಲೂಕು ಕಚೇರಿಯಲ್ಲಿ ಪಡೆಯಬಹುದು. ಈ ಎಲ್ಲಾ ಕಾರ್ಯಗಳನ್ನು ಸುಗಮಗೊಳಿಸಲು ಕಂದಾಯ ಸಚಿವರ ವಿನೂತನ ಕಾರ್ಯಕ್ರಮವೇ ಕಾರಣ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ಎಲ್ಲಾ ಭೂಮಿಗಳಿಗೂ ಸಾಗುವಳಿ ಚೀಟಿ ನೀಡುವ ಉದ್ದೇಶದಿಂದ ಪ್ರತಿ 15 ದಿನಗಳಿಗೊಮ್ಮೆ ಸಭೆ ನಡೆಸಲಾಗುತ್ತಿದೆ. ಶೀಘ್ರ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ ಸಕ್ರಮೀಕರಣಗೊಳಿಸಲಾಗುವುದು ಎಂದರು.

ಸಾವಿರ ಗ್ರಾಮಗಳಿಗೆ ಹಕ್ಕು ಪತ್ರ ವಿತರಣೆ : 94ಸಿ ಹಾಗೂ 94ಸಿಸಿ ಅಡಿಯಲ್ಲಿ ಹಕ್ಕುಪತ್ರ ನೀಡಲಾಗುವುದು. ಒಂದು ಸಾವಿರ ಕಂದಾಯ ಗ್ರಾಮಗಳಿಗೆ ಹಕ್ಕು ಪತ್ರ ನೀಡಲು ಸಿದ್ಧತೆ ನಡೆಸಲಾಗಿದೆ ಎಂದರು.

ಅಕ್ರಮ ಮದ್ಯ ಮಾರಾಟ ನಿಷೇಧ : ಅಬಕಾರಿ, ರಕ್ಷಣಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿದ ಶಾಸಕರು ಕಳೆದ ಎರಡು ವರ್ಷಗಳಿಂದ ಹೊಸದುರ್ಗ ತಾಲ್ಲೂಕಿನಾದ್ಯಂತ ಶಾಂತಿ, ನೆಮ್ಮದಿಯಿಂದ ಕೂಡಿದೆ. ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಆಗುತ್ತಿದ್ದು, ಹಲವರು ಪ್ರಾಣಕ್ಕೆ ತುತ್ತಾಗಿದೆ. ಹೀಗಾಗಿ ಕೊಟ್ಟು ನಿಟ್ಟು ಸೂಚನೆ ಹೊರಡಿಸಲಾಗಿದೆ. ಮದ್ಯದ ಅಂಗಡಿಯವರು ಮದ್ಯ ಮಾರಾಟಕ್ಕಾಗಿ ಕಡ್ಡಾಯವಾಗಿ ಪರವಾನಗಿ ಪಡೆಯಲೇಬೇಕು. ಒಂದು ವೇಳೆ ಆಗಾಗದಿದ್ದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ನ್ಯಾಯಯುತ ವ್ಯಾಪಾರಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗುವುದು ಎಂದು ಶಾಸಕ ಬಿ.ಜಿ ಗೋವಿಂದಪ್ಪ ಎಚ್ಚರಿಸಿದರು.

ತಹಶೀಲ್ದಾರ್ ತಿರುಪತಿ ಪಾಟೀಲ್, ವಲಯ ಅರಣ್ಯಾಧಿಕಾರಿ ಸುನೀಲ್ ಕುಮಾರ್, ಬಗರ್ ಹುಕುಂ ಸಮಿತಿ ಸದಸ್ಯರುಗಳಾದ ಮಲ್ಲಿಕಾರ್ಜುನ್, ಮಹೇಶ್, ಮಣ್ಣಮ್ಮ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T